MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER — VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್ Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ Cell : 9743496111

ಸಂಪುಟ: 05 | ಸಂಚಿಕೆ: 36 | ಶನಿವಾರ : 22–11–2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2–00

VOLUME: 05 | ISSUE: 36 | SATURDAY : 22–11–2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ತಾರಕಕ್ಕೇರಿದ ಕುರ್ಚಿ ಕಾದಾಟ
# ಕೊಡದ ಸಿದ್ದು, ಬಿಡದ ಡಿಕೆಶಿ

**ಬೆಂಗಳೂರು, ನ.21–** ನಾ–ಕೊಡೆ, ನೀ–ಬಿಡೆ ಎಂಬಂತೆ ರಾಜ್ಯ ಕಾಂಗ್ರೆಸ್‌ನಲ್ಲಿ ಅಧಿಕಾರ ಹಂಚಿಕೆಯ ಕದನ ಜೋರಾಗಿದ್ದು, ಮುಖ್ಯಮಂತ್ರಿ ಸಿದ್ಧರಾಮಯ್ಯ ಬಣ ಅಧಿಕಾರ ಉಳಿಸಿಕೊಳ್ಳಲು ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಬಣ ಸಿಎಂ ಕುರ್ಚಿ ಗಿಟ್ಟಿಸಿಕೊಳ್ಳಲು ತಮ್ಮದೇ ಆದ ರಾಜಕೀಯ ದಾಳ ಉರುಳಿಸಿದ್ದಾರೆ.



ಉಪಮುಖ್ಯಮಂತ್ರಿ ಡಿಕೆಶಿ ಬಣದ ಕೆಲ ಸಚಿವರು, ಶಾಸಕರು ದೆಹಲಿಗೆ ತೆರಳಿ ಹೈಕಮಾಂಡ್‌ನ್ನು ಭೇಟಿ ಮಾಡಿ ಅಧಿಕಾರ ಹಂಚಿಕೆಯ ಒಪ್ಪಂದ ಜಾರಿಗೆ ಆಗ್ರಹಿಸಿದ್ದರೆ, ಮುಖ್ಯಮಂತ್ರಿ ಸಿದ್ಧರಾಮಯ್ಯ ಆಪ್ತ ಸಚಿವರುಗಳು ನಿನ್ನೆ ರಾತ್ರಿ ಡಿನ್ನರ್ ಮೀಟಿಂಗ್ ನಡೆಸಿ ಅಧಿಕಾರ ಉಳಿಸಿಕೊಳ್ಳಲು ಏನೆಲ್ಲಾ ಕಾರ್ಯತಂತ್ರಗಳನ್ನು ರೂಪಿಸಬೇಕು ಎಂಬ ಬಗ್ಗೆ ಚರ್ಚೆ ನಡೆಸಿದ್ದಾರೆ.

ರಾಜ್ಯದ ಕಾಂಗ್ರೆಸ್ ಸರ್ಕಾರ ಎರಡೂವರೆ ವರ್ಷ ಪೂರೈಸಿದ ಬೆನ್ನಲ್ಲೆ ಅಧಿಕಾರ ಹಂಚಿಕೆಯ ಕೂಗು ಮತ್ತೆ ಮುನ್ನಲೆಗೆ ಬಂದಿದ್ದು, ಇಷ್ಟು ದಿನ ತೆರೆಮರೆಯಲ್ಲಿ **(2ನೇ ಪುಟಕ್ಕೆ)**

## ಸಂವಿಧಾನ ದಿನಾಚರಣೆಗೆ ಅಗತ್ಯ ಸಿದ್ಧತೆಯಾಗಲಿ: ಶಿವಾನಂದ



ಯುವಮಾರ್ಗ ಸುದ್ದಿ

**ರಾಯಚೂರು,ನ.21–** ನವೆಂಬರ್ 26 ರಂದು ರಾಯಚೂರು ಜಿಲ್ಲಾ ಮತ್ತು ಸಿಂಧನೂರ, ಮಾನವಿ, ಲಿಂಗಸಗೂರು, ಸಿರವಾರ, ಅರಕೇರಿ, ದೇವದುರ್ಗ ಸೇರಿದಂತೆ ಎಲ್ಲಾ ತಾಲೂಕು ಕೇಂದ್ರಗಳಲ್ಲಿ ಸಂವಿಧಾನ ದಿನಾಚರಣೆಯನ್ನು ಅಚ್ಚುಕಟ್ಟಾಗಿ ಆಚರಣೆ ಮಾಡಲು ಎಲ್ಲಾ ರೀತಿಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನವೆಂಬರ್ 21ರಂದು ಸಂಜೆ, ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಮಾತನಾಡಿದ ಅವರು, ಡಾ.ಬಿ.ಆರ್. ಅಂಬೇಡ್ಕರ್ ಸಂಶೋಧನಾ ಸಂಸ್ಥೆಯಿಂದ ಸಂವಿಧಾನ ಪುಸ್ತಕಗಳನ್ನು ಪೂರೈಸಲಾಗುತ್ತಿದ್ದು, ನವೆಂಬರ್ 26ರಂದು ಜಿಲ್ಲೆಯ ಎಲ್ಲಾ ಪ್ರೌಢಶಾಲೆಗಳು ಮತ್ತು ಕಾಲೇಜು ವಿದ್ಯಾರ್ಥಿಗಳಿಂದ ಜಿಲ್ಲಾ ಹಾಗೂ ತಾಲೂಕು ಮಟ್ಟದಲ್ಲಿ ರಾಷ್ಟ್ರಧ್ವಜಗಳ ಪ್ರದರ್ಶನದೊಂದಿಗೆ ವಿದ್ಯಾರ್ಥಿಗಳಿಂದ ಸಂವಿಧಾನ ಪುಸ್ತಕಗಳನ್ನು ಪ್ರದರ್ಶಿಸುವುದರೊಂದಿಗೆ ಜಾಥಾಗಳನ್ನು ಹಮ್ಮಿಕೊಳ್ಳಬೇಕು. ಜಾಥಾದಲ್ಲಿ ಸಂವಿಧಾನದ ಕುರಿತು ಡಾ.ಬಿ.ಆರ್. ಅಂಬೇಡ್ಕರ್ ಅವರ ಪ್ರಮುಖ ನುಡಿಮುತ್ತುಗಳ ಪ್ಲೇಕಾರ್ಡಗಳನ್ನು **(2ನೇ ಪುಟಕ್ಕೆ)**

## ಶ್ರೀಈಶ್ವರ ದೇವಸ್ಥಾನದ 23ನೇ ವಾರ್ಷಿಕೋತ್ಸವ ಹಾಗೂ ಕಾರ್ತಿಕ ಮಾಸದ ಸಹಸ್ರ ದೀಪೋತ್ಸವ

ಯುವಮಾರ್ಗ ಸುದ್ದಿ


**ಮಾನ್ವಿ,ನ.21–** ಪಟ್ಟಣದ ಪಂಪಾ ಹೌಸಿಂಗ್ ಕಾಲೋನಿಯಲ್ಲಿನ ಶ್ರೀ ಈಶ್ವರ ದೇವಸ್ಥಾನದ 23ನೇ ವಾರ್ಷಿಕೋತ್ಸವ ಹಾಗೂ ಕಾರ್ತಿಕ ಮಾಸದ ಸಹಸ್ರ ದೀಪೋತ್ಸವ ಕಾರ್ಯಕ್ರಮವನ್ನು ಚೀಕಲಪರ್ವಿ ಶ್ರೀ ರುದ್ರಮುನೀಶ್ವರ ಮಠದ ಶ್ರೀ ಸದಾಶಿವ ಸ್ವಾಮಿಗಳು ದೀಪವನ್ನು ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿ ನಮ್ಮ ಸುತ್ತಮುತ್ತಲಿನ ಪ್ರಕೃತಿ ಪಂಚಭೂತಗಳಿಂದ ಸೃಷ್ಟಿಯಾಗಿದ್ದು ನಮ್ಮ ದೇಹವು ಪಂಚ ತತ್ವಗಳಿಂದ ನಿರ್ಮಾಣವಾಗಿದೆ ನಾವು ಪ್ರಕೃತಿಯನ್ನು ಹಾಗೂ ದುಶ್ಚಟಗಳಿಂದ ದೇಹವು ಕೂಡ ಮಲಿನವಾಗುತ್ತದೆ ಅದ್ದರೆ ಪಂಚಭೂತಗಳಲ್ಲಿ ಒಂದಾಗಿರುವ ಅಗ್ನಿಯನ್ನು ಯಾರು ಕೂಡ ಮಲಿನ ಮಾಡುವುದಕ್ಕೆ ಬರುವುದಿಲ್ಲ ಅಗ್ನಿ ಅತ್ಯಂತ ಪವಿತ್ರವಾಗಿರುತ್ತದೆ.

ಕಾರ್ತಿಕ ಮಾಸದಲ್ಲಿ ದೇವಸ್ಥಾನದ ಆವರಣದಲ್ಲಿ ಪವಿತ್ರವಾದ ದೀಪಗಳನ್ನು ಬೆಳಗಿಸುವುದರ ಮೂಲಕ ನಮ್ಮಲಿನ ಅತ್ಮ ಚೈತನ್ಯವನ್ನು ಬೆಳಗಿಸಿಕೊಳ್ಳಬೇಕು ಪ್ರತಿಯೊಬ್ಬ ಪಾಲಕರು ಕೂಡ ತಮ್ಮ ಮಕ್ಕಳಿಗೆ ನಮ್ಮ ಹಿಂದೂ ಧರ್ಮದ ಪಂಚಾಂಗಗಳ ಬಗ್ಗೆ ಮಾಸಗಳ ಬಗ್ಗೆ ನಕ್ಷತ್ರಗಳ ಬಗ್ಗೆ ,ನಮ್ಮ ಸನಾತನ ಪರಂಪರೆಯ ಬಗ್ಗೆ **(2ನೇಪುಟಕ್ಕೆ..)**



## ಪಾಕ್ ಪರ ಬೇಹುಗಾರಿಕೆ ಮಲ್ಪೆಯಲ್ಲಿ ಇಬ್ಬರ ಸೆರೆ





**ಉಡುಪಿ, ನ.21–** ಪಾಕಿಸ್ತಾನ ಪರ ಬೇಹುಗಾರಿಕೆ ಮಾಡುತ್ತಿದ್ದ ಉತ್ತರ ಪ್ರದೇಶ ಮೂಲದ ಇಬ್ಬರನ್ನು ಮಲ್ಪೆಯಲ್ಲಿ ಬಂಧಿಸಿ ತೀವ್ರ ವಿಚಾರಣೆ ನಡೆಸಲಾಗಿದೆ.

ಮಲ್ಪೆಯಲ್ಲಿರುವ ಕೊಚ್ಚಿನ್ ಶಿಪ್ ಯಾರ್ಡ್ ಘಟಕದಲ್ಲಿ ಕೆಲಸ ಮಾಡುತ್ತಿದ್ದ ಉತ್ತರ ಪ್ರದೇಶ ಮೂಲದ ರೋಹಿತ್ ಮತ್ತು ಸಂತ್ರಿ ಬಂಧಿತ ಆರೋಪಿಗಳಾಗಿದ್ದಾರೆ.

ಆರೋಪಿಗಳು ಪಾಕಿಸ್ತಾನಕ್ಕೆ ರಹಸ್ಯ ಮಾಹಿತಿಯನ್ನು ರವಾನಿಸುತ್ತಿದ್ದರು ಎನ್ನಲಾಗಿದೆ. ಬಂಧಿತರಿಬ್ಬರೂ ಸುಷ್ಮಾ ಮೆರಿನ್ ಪ್ರೈವೇಟ್ ಲಿಮಿಟೆಡ್ ಮೂಲಕ ಗುತ್ತಿಗೆ ಆಧಾರದಲ್ಲಿ ಕೊಚ್ಚಿನ್ ಶಿಪ್ ಯಾರ್ಡ್‌ನಲ್ಲಿ ಕೆಲಸಕ್ಕೆ ಸೇರಿಕೊಂಡಿದ್ದರು.

ಕೊಚ್ಚಿನ್ ಶಿಪ್ ಯಾರ್ಡ್ ಭಾರತೀಯ ನೌಕಾಪಡೆಗೆ ಟಗ್‌ಗಳನ್ನು ನಿರ್ಮಿಸಿ ಕೊಡುವ ಸಂಸ್ಥೆಯಾಗಿದ್ದು,ಖಾಸಗಿ ಸಂಸ್ಥೆಗಳಿಗೂ ಹಡಗುಗಳನ್ನು ನಿರ್ಮಿಸಿಕೊಡುತ್ತಿದ್ದ ಸಂಸ್ಥೆಯ ಪ್ರಧಾನ ಕಚೇರಿ ಕೇರಳದಲ್ಲಿದೆ. **(2ನೇಪುಟಕ್ಕೆ..)**

## ಸುಕ್ಷೇತ್ರ ಜಡೆಯ ಶಂಕರಲಿಂಗ ದೇವಸ್ಥಾನದಲ್ಲಿ ದೀಪೋತ್ಸವದಿಂದ ಐಶ್ವರ್ಯ, ಆರೋಗ್ಯ ಭಾಗ್ಯ ಪ್ರಾಪ್ತಿ : ಚನ್ನಪ್ಪ ಹರಸೂರ

ಯುವಮಾರ್ಗ ಸುದ್ದಿ

**ಲಿಂಗಸುಗೂರು,ನ.21–** ನವಲಿ ಗ್ರಾಮದಲ್ಲಿ ಕಾರ್ತಿಕ ಮಾಸ ದೀಪ ಬೆಳಗುವ ಮಾಸ. ಕರ್ನಾಟಕದಾದ್ಯಂತ ಹಿಂದೂ ದೇವಾಲಯಗಳಲ್ಲಿ ಕಾರ್ತಿಕ ದೀಪೋತ್ಸವ ಆಚರಣೆ ಭಕ್ತಿ. ಸಂಭ್ರಮದಿಂದ ನಡೆಯುತ್ತದೆ ದೀಪೋತ್ಸವದಿಂದ ಐಶ್ವರ್ಯ. ಸಂಪತ್ತು ಆರೋಗ್ಯ ಭಾಗ್ಯ ಪ್ರಾಪ್ತಿಯಾಗುತ್ತದೆ. ನಮ್ಮ ಬಣಗಾರ ಸಿಂಪಿ ಸಮಾಜ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಸುಕ್ಷೇತ್ರ ನವಲಿ ಜಡೆಯ ಶಂಕರನ ದೇವಸ್ಥಾನಕ್ಕೆ ಆಗಮಿಸಿ ಪ್ರತಿ ಅಮಾವಾಸ್ಯೆ ಕಾರ್ಯಕ್ರಮವನ್ನು ಯಶಸ್ಸಿಗೊಳಿಸಬೇಕೆಂದು. ಅಧ್ಯಕ್ಷರು ಬಣಗಾರ ಸಮಾಜ ಬೆಂಗಳೂರು ಚೆನ್ನಪ್ಪ ಹರಸೂರ ಮಸ್ಕಿ ಹೇಳಿದರು.

ತಾಲೂಕಿನ ಸುಕ್ಷೇತ್ರ ಶ್ರೀ ಜಡೆಯ ಶಂಕರಲಿಂಗ ದೇವಸ್ಥಾನದಲ್ಲಿ ಛಟ್ಟಿ ಅಮಾವಾಸ್ಯೆ ಅಂಗವಾಗಿ ವಿಶೇಷ ಪೂಜೆ ಹಾಗೂ ಅನ್ನದಾಸೋಹ ಮತ್ತು ಕಾರ್ತಿಕ ದೀಪೋತ್ಸವ ಬಣಗಾರ ಸಿಂಪಿ ಸಮಾಜದ ದಾಸೋಹ ಸಂಘಟಕರು ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದರು.




ಕಾರ್ತಿಕ ದೀಪೋತ್ಸವವು ಭಕ್ತಿ. ಧ್ಯಾನ ಮತ್ತು ಆತ್ಮಜ್ಞಾನದ ಕಡೆಗೆ ಸಾಗಲು ಪ್ರೇರೆಪಿಸುವ ಆಧ್ಯಾತ್ಮಿಕ ಮಹತ್ವದ ಹಬ್ಬವಾಗಿದೆ. ಭಾರತೀಯರು ವಸು ದೈವ ಕುಟುಂಬಂ ಎಂಬ ಧ್ಯೇಯ ವಾಕ್ಯದಲ್ಲಿ ಸಂಪೂರ್ಣವಾಗಿ ನಂಬಿಕೆಯನ್ನು ಟ್ಟುಕೊಂಡವರು ಶ್ರದ್ಧೆ ಮತ್ತು ಭಕ್ತಿಗಳಿಗೆ ಹೆಸರಾದ ಭಾರತೀಯ ಸಂಪ್ರದಾಯವನ್ನು ಇನ್ನಷ್ಟು ಗಟ್ಟಿಗೊಳಿಸಲು ಇಂತಹ ಕಾರ್ಯಕ್ರಮಗಳು ಅಗತ್ಯ. ಬಣಗಾರ್ ಸಿಂಪಿ ಸಮಾಜದ ಎಲ್ಲಾ ಊರಿನ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಶ್ರೀ ಜಡೆಯ ಶಂಕರಲಿಂಗ ದೇವಸ್ಥಾನಕ್ಕೆ ಆಗಮಿಸಬೇಕೆಂದು. ಬಣಗಾರ್ ಸಿಂಪಿ**(2ನೇಪುಟಕ್ಕೆ)**

## ರಾಯಚೂರಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಪ್ರಚಾರದ ಕಲಾ ಜಾಥಾಕ್ಕೆ ಚಾಲನೆ



ಯುವಮಾರ್ಗ ಸುದ್ದಿ

**ರಾಯಚೂರು,ನ.21–** ರಾಜ್ಯ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳಾದ ಅನ್ನಭಾಗ್ಯ, ಗೃಹಲಕ್ಷ್ಮೀ, ಗೃಹಜ್ಯೋತಿ, ಶಕ್ತಿ ಹಾಗೂ ಯುವನಿಧಿ ಯೋಜನೆ ಕುರಿತಂತೆ ಎಲ್‌ಇಡಿ ವಾಹನದ ಮೂಲಕ ಕಿರುಚಿತ್ರಗಳ ಪ್ರದರ್ಶನ, ಸಂಗೀತ, ಬೀದಿ ನಾಟಕದಿಂದ ಜನಸಾಮಾನ್ಯರಿಗೆ ಮಾಹಿತಿ ಹಾಗೂ ಪ್ರಚಾರ ನೀಡಲು ಹಮ್ಮಿಕೊಂಡಿರುವ ಕಲಾ ಜಾಥಾ ಕಾರ್ಯಕ್ರಮಕ್ಕೆ ನವೆಂಬರ್ 20ರಂದು ಚಾಲನೆ ಸಿಕ್ಕಿತು.

ನಗರದ ಜಿಲ್ಲಾ ಪಂಚಾಯತ್ ಕಚೇರಿ ಆವರಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಜಿಲ್ಲಾಮಟ್ಟದ ಸಮಿತಿಯ ಉಪಾಧ್ಯಕ್ಷರಾದ ನಾಗೇಂದ್ರ ಮಟಮಾರಿ, ಹನುಮಂತಪ್ಪ ಜಾಲಿಬೆಂಚಿ ಹಾಗೂ ತಾಲೂಕುಮಟ್ಟದ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ ಅವರು ಹಸಿರು ನಿಶಾನೆ ತೋರುವ ಮೂಲಕ ಕಲಾ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಈ ವೇಳೆ ಹನುಮಂತಪ್ಪ ಜಾಲಿಬೆಂಚಿ ಅವರು ಮಾತನಾಡಿ, ಜನತೆಗೆ ಮಾತು ನೀಡಿದಂತೆ ರಾಜ್ಯ ಸರ್ಕಾರವು ವಾರ್ಷಿಕವಾಗಿ 52.000 **(2ನೇಪುಟಕ್ಕೆ..)**

## ಎಲ್ಲ ಅಂಗನವಾಡಿಗಳಲ್ಲೂ ಶಾಲಾ ಪೂರ್ವ ಚಟುವಟಿಕೆಗಳು ಅತ್ಯುತ್ತಮವಾಗಿ ನಡೆಯಲಿ: ಪ್ರಿತಮ್ ಬಿ.ಯಶವಂತ ಸಲಹೆ

ಯುವಮಾರ್ಗ ಸುದ್ದಿ



**ರಾಯಚೂರು,ನ.21–**ಭಾರತ ಸರ್ಕಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಂಟಿ ಕಾರ್ಯದರ್ಶಿಗಳಾದ ಪ್ರಿತಮ್ ಬಿ.ಯಶವಂತ ಅವರು ರಾಯಚೂರು ಜಿಲ್ಲೆಗೆ ಇತ್ತೀಚೆಗೆ ಭೇಟಿ ನೀಡಿ, ಅಂಗನವಾಡಿಗಳಲ್ಲಿನ ಶೈಕ್ಷಣಿಕ ಸ್ಥಿತಿಗತಿ, ಐಸಿಡಿಎಸ್ ಮತ್ತು ಇತರೆ ಯೋಜನೆಗಳ ಬಗ್ಗೆ ಪರಿಶೀಲನೆ ನಡೆಸಿದರು.

ಮೊದಲಿಗೆ ರಾಯಚೂರು ಗ್ರಾಮೀಣ ಪ್ರದೇಶದ ಎಲೆಬಿಚ್ಯಾಲಿ ಗ್ರಾಮದ ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡಿ ಅಲ್ಲಿನ ಮಕ್ಕಳು, ಗರ್ಭಿಣಿಯರು ಮತ್ತು ಬಾಣಂತಿಯರಿಗೆ ನೀಡುವ ಸೌಕರ್ಯಗಳ ಬಗ್ಗೆ ಅಂಗನವಾಡಿ ಕಾರ್ಯಕರ್ತೆಯರಿಂದ ಮಾಹಿತಿ ಪಡೆದುಕೊಂಡು, ಕೇಂದ್ರದಲ್ಲಿ ಸಿದ್ಧಪಡಿಸಿದ್ದ ಆಹಾರದ ಗುಣಮಟ್ಟ ಪರಿಶೀಲಿಸಿದರು.

ಅಂಗನವಾಡಿ ಕಾರ್ಯಕರ್ತೆಯರಿಗೆ ಶಾಲಾಪೂರ್ವ ಶಿಕ್ಷಣದ ಬಗ್ಗೆ ತರಬೇತಿ ನೀಡಲಾಗಿದೆಯೇ ಎಂದು ಪ್ರಶ್ನಿಸಿ ಅಂಗನವಾಡಿ ಕೇಂದ್ರಗಳಲ್ಲಿನ ಇಸಿಸಿ ಚಟುವಟಿಕೆಗಳ ಬಗ್ಗೆ ಪರಿಶೀಲಿಸಿದರು. ಅಂಗನವಾಡಿಗಳಲ್ಲಿನ 5 ರಿಂದ 6 ವರ್ಷದ ಮಕ್ಕಳಿಗೆ ಚಿತ್ರಕಲೆ ಬಿಡಿಸುವುದು, ಅಕ್ಷರ ಅಭ್ಯಾಸ ಮಾಡಿಸುವುದು ಮತ್ತು ವಾರದ ಚಟುವಟಿಕೆಗಳನ್ನು ನಡೆಸುವ ಪುಸ್ತಕಗಳನ್ನು ಪರಿಶೀಲಿಸಿ ಶಾಲಾ ಪೂರ್ವ ಶಿಕ್ಷಣದ ತರಬೇತಿಯ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು. ಅಂಗನವಾಡಿ ಕಟ್ಟಡವನ್ನು ಯಾವ ವರ್ಷದಲ್ಲಿ ನಿರ್ಮಾಣ ಮಾಡಲಾಗಿದೆ? ಘಟಕದ ವೆಚ್ಚ ಎಷ್ಟು? ಯಾವ ಯೋಜನೆಯಲ್ಲಿ ನಿರ್ಮಾಣ ಮಾಡಲಾಗಿದೆ? ಎಂದು ಕೇಳಿ ಕಟ್ಟಡದ ಗುಣಮಟ್ಟ ಹಾಗೂ ಅಲ್ಲಿನ ಮೂಲಭೂತ ಸೌಲಭ್ಯಗಳ ಬಗ್ಗೆ ಪರಿಶೀಲಿಸಿದರು.

ಬಳಿಕ ಅವರು ಹಂಚಿನಾಳ ಗ್ರಾಮದ ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿದರು. ಮಕ್ಕಳಿಗೆ ನೀಡುವ ಮಿಲ್ಲೆಟ್ ಲಾಡುವಿನ ಗುಣಮಟ್ಟ ಮತ್ತು ಅದರ ರುಚಿಯನ್ನು ಪರಿಶೀಲಿಸಿದರು. ಕೇಂದ್ರದಲ್ಲಿ ಸೋಲಾರ್ ವಿದ್ಯುತ್ ಅಳವಡಿಸಿರುವುದನ್ನು ಗಮನಿಸಿ ಇದು ಉತ್ತಮವಾದ ಬೆಳವಣಿಗೆ ಆಗಿದ್ದು, ಈ ರೀತಿ ಎಲ್ಲಾ ಅಂಗನವಾಡಿ ಕೇಂದ್ರಗಳಲ್ಲಿ ಸೋಲಾರ್ ವ್ಯವಸ್ಥೆ ಮಾಡಿಸುವ ಬಗ್ಗೆ ಗಮನ ಹರಿಸಿ ಎಂದು ತಿಳಿಸಿದರು.

ಬಳಿಕ ರಾಯಚೂರು ನಗರ ಯೋಜನೆಯ ಸಿಯಾತಲಾಬ್ ಬಡಾವಣೆಯ 02 ಅಂಗನವಾಡಿ ಕೇಂದ್ರಗಳಿಗೆ ಸಹ ದಿಢೀರ್ ಭೇಟಿ ನೀಡಿದರು. ಅಂಗನವಾಡಿ ಕೇಂದ್ರವು ಬಾಡಿಗೆ ಕಟ್ಟಡದಲ್ಲಿರುವುದನ್ನು ಗಮನಿಸಿ, ಈ ಕಟ್ಟಡಕ್ಕೆ ಎಷ್ಟು ಬಾಡಿಗೆ ನೀಡಲು ಅವಕಾಶವಿದೆ ಎಂದು ಕೇಳಿದರು. ಎರಡೂ ಕೇಂದ್ರಗಳಲ್ಲಿನ ಆಹಾರ ಧಾನ್ಯಗಳ ಬಗ್ಗೆ ಪರಿಶೀಲಿಸಿದರು. ಅಪೌಷ್ಟಿಕತೆಯನ್ನು ಹೋಗಲಾಡಿಸುವ ನಿಟ್ಟಿನಲ್ಲಿ ಹೆಚ್ಚಿನ ಪೌಷ್ಟಿಕಾಂಶ ಹೊಂದಿರುವ ಆಹಾರವನ್ನು ಮಕ್ಕಳಿಗೆ ನೀಡಲು ಹಾಗೂ ಚಿಕಿತ್ಸೆಗಾಗಿ ಮಕ್ಕಳನ್ನು ಎನ್.ಆರ್.ಸಿ ಕೇಂದ್ರಕ್ಕೆ ಕಳುಹಿಸಲು ಅಗತ್ಯ ಕ್ರಮ ವಹಿಸಬೇಕು ಎಂದು ಸೂಚನೆ ನೀಡಿದರು. ಅಂಗನವಾಡಿ ಮಕ್ಕಳ ಶಾಲಾಪೂರ್ವ ಚಟುವಟಿಕೆಗಳ ಬಗ್ಗೆ ಕೇಳಿದರು. ಅಂಗನವಾಡಿಗಳಲ್ಲಿ ಪ್ರತಿ ದಿನ ನಡೆಯುವ ಚಟುವಟಿಕೆಗಳಿಗೆ **(2ನೇಪುಟಕ್ಕೆ...)**

## ಮೊದಲನೇಯ ಪುಟದಿಂದ

## ಸಂವಿಧಾನ ದಿನಾಚರಣೆಗೆ ಅಗತ್ಯ ಸಿದ್ಧತೆಯಾಗಲಿ: ಶಿವಾನಂದ

ಪ್ರದರ್ಶಿಸಬೇಕು. ಜಿಲ್ಲಾ ಹಾಗೂ ಎಲ್ಲ ತಾಲೂಕು ಕೇಂದ್ರದಲ್ಲಿ ವೇದಿಕೆ ಕಾರ್ಯಕ್ರಮ ರೂಪಿಸಿ ನುರಿತ ಸಂಪನ್ಮೂಲ ವ್ಯಕ್ತಿಗಳಿಂದ ಸಂವಿಧಾನದ ಕುರಿತು ಉಪನ್ಯಾಸ ಏರ್ಪಡಿಸಬೇಕು ಎಂದು ಅವರು ಸೂಚನೆ ನೀಡಿದರು.

ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯ ಸಂದರ್ಭದಲ್ಲಿ ಆಯೋಜಿಸಲಾದ ಚರ್ಚಾ ಸ್ಪರ್ಧೆ, ಚಿತ್ರಕಲಾ ಸ್ಪರ್ಧೆ, ಛಾಯಾಚಿತ್ರ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಇದೆ ವೇಳೆ ಬಹುಮಾನ ವಿತರಣೆಗೆ ಕ್ರಮ ವಹಿಸಬೇಕು. ಈ ಸಂವಿಧಾನ ದಿನಾಚರಣೆಯಲ್ಲಿ ಪಾಲ್ಗೊಂಡ ಮಕ್ಕಳಿಗೆ ಕಡ್ಡಾಯವಾಗಿ ಲಘು ಉಪಹಾರದ ವ್ಯವಸ್ಥೆ ಮಾಡಬೇಕು ಎಂದು ಅವರು ತಿಳಿಸಿದರು.

**ತಾಲೂಕುಮಟ್ಟದ ಅಧಿಕಾರಿಗಳಿಗೆ ಸೂಚನೆ:** ಸಿಂಧನೂರ, ಮಾನವಿ, ಲಿಂಗಸಗೂರು, ಸಿರವಾರ, ಅರಕೇರಿ, ದೇವದುರ್ಗ ತಾಲ್ಲೂಕು ಮಟ್ಟದಲ್ಲಿ ತಹಶೀಲ್ದಾರಗಳು, ತಾಲೂಕು ಪಂಚಾಯತ್ ಕಾರ್ಯ ನಿರ್ವಹಣಾಧಿಕಾರಿಗಳು ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಒಗ್ಗೂಡಿ ಶಿಷ್ಟಾಚಾರ ಪಾಲಿಸಿ ಕಾರ್ಯಕ್ರಮಗಳನ್ನು ಅಚ್ಚುಕಟ್ಟಾಗಿ ಅನುಷ್ಠಾನಗೊಳಿಸಲು ಈಗಿನಿಂದಲೇ ಕ್ರಮವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ನವೆಂಬರ್ 26ರಂದು ವಿಶೇಷ ಜಾಥಾ: ರಾಯಚೂರು ಜಿಲ್ಲಾ ಕೇಂದ್ರದಲ್ಲಿ ನವೆಂಬರ್ 26ರಂದು ಸಂವಿಧಾನ ಜಾಗೃತಿ ಜಾಥಾವನ್ನು ವಿಶೇಷವಾಗಿ ನಡೆಸಲು ಸಭೆಯಲ್ಲಿ ನಿರ್ಣಯಿಸಲಾಯಿತು. ಅಂದು ಬೆಳಗ್ಗೆ 9 ಗಂಟೆಗೆ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಿಂದ ಜಾಥಾ ಆರಂಭವಾಗಿ ಬಸ್ ನಿಲ್ದಾಣದ ಮಾರ್ಗ ಬಳಸಿ ತೀನ್ ಕಂದಿಲ್ ವೃತ್ತ, ಚಟ್ಟಿಭಾವಿ ಚೌಕ್, ಸರ್ದಾರ್ ವಲ್ಲಭಬಾಯಿ ಪಟೇಲ್ ರಸ್ತೆ, ಗಾಂಧಿ ಚೌಕ್, ಹಳೆಯ ಡಿ.ಸಿ ಆಫೀಸ್ ರಸ್ತೆ, ಬಸವೇಶ್ವರ ವೃತ್ತ, ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಿಂದ ಜಿಲ್ಲಾ ರಂಗಮಂದಿರವರೆಗೆ ನಡೆಸಲು ಸಭೆಯಲ್ಲಿ ಚರ್ಚಿಸಿ ನಿರ್ಣಯಿಸಲಾಯಿತು. ಸಂವಿಧಾನ ದಿನಾಚರಣೆಯ ವೇದಿಕೆಯ ಕಾರ್ಯಕ್ರಮವನ್ನು ಜಿಲ್ಲಾ ರಂಗಮಂದಿರದಲ್ಲಿ ನಡೆಸಲು ನಿರ್ಣಯಿಸಲಾಯಿತು. ಸಂವಿಧಾನದ ಬಗ್ಗೆ ವಿದ್ಯಾರ್ಥಿಗಳಿಗೆ ಜಾಗೃತಿ ಮೂಡಿಸಲು ನಿಟ್ಟಿನಲ್ಲಿ ಸಂಪನ್ಮೂಲ ವ್ಯಕ್ತಿಗಳಿಂದ ಸಂವಿಧಾನ ಜಾಗೃತಿಯ ಉಪನ್ಯಾಸ ಏರ್ಪಡಿಸಬೇಕು. ಶಿಷ್ಟಾಚಾರದಂತೆ ಆಹ್ವಾನ ಪತ್ರಿಕೆಯನ್ನು ಮುದ್ರಿಸಬೇಕು ಎಂದು ಅಪರ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

**ಅಚ್ಚುಕಟ್ಟಾಗಿ ನಡೆಯಲಿ:** ಸಂವಿಧಾನ ದಿನಾಚರಣೆಯ ಕಾರ್ಯಕ್ರಮವನ್ನು ರಾಜ್ಯ ಸರ್ಕಾರವು ವಿಶಿಷ್ಟವಾಗಿ ಆಚರಿಸುತ್ತಿರುವುದು ಸಂತಷದ ಸಂಗತಿಯಾಗಿದೆ. ಕಾರ್ಯಕ್ರಮಕ್ಕೆ ಕೆಲವೇ ದಿನಗಳು ಬಾಕಿ ಇದ್ದು, ಕಾರ್ಯಕ್ರಮ ಅಚ್ಚುಕಟ್ಟಾಗಿ ನಡೆಯಲು ಜಿಲ್ಲೆಯ ಎಲ್ಲಾ ಸಂಘ ಸಂಸ್ಥೆಗಳಿಂದ ಅಗತ್ಯ ಸಹಕಾರ ನೀಡಲಾಗುವುದು ಎಂದು ಸಂವಿಧಾನ ಸಂರಕ್ಷಣಾ ಪಡೆಯ ಕೆ.ಇ.ಕುಮಾರ, ಮುಖಂಡರಾದ ಎಂ.ಆರ್.ಭೇರಿ, ವಿಶ್ವನಾಥ ಪಟ್ಟಿ, ಬಸವರಾಜ ಸಾಸಲಮರಿ ಹಾಗೂ ಇನ್ನೀತರರು ಸಲಹೆ ಮಾಡಿದರು.

ಎಲ್ಲರೂ ಭಾಗಿಯಾಗಲಿ: ಅವರು ಇವರು ಎನ್ನದೇ ಎಲ್ಲರನ್ನೂ ಒಳಗೊಂಡಿರುವುದೇ ಸಂವಿಧಾನದ ವಿಶೇಷತೆಯಾಗಿದೆ. ನವೆಂಬರ್ 26ರಂದು ರಾಯಚೂರು ಜಿಲ್ಲೆಯಲ್ಲಿ ನಡೆಯುವ ಸಂವಿಧಾನ ಜಾಗೃತಿ ಜಾಥಾದಲ್ಲಿ ಎಲ್ಲ ಸಮುದಾಯಗಳ ಸಂಘಟನೆಗಳು, ನಾಗರಿಕರು, ಯುವಕರು, ಮಹಿಳೆಯರು ತಪ್ಪದೇ ಭಾಗಿಯಾಗಿ ಸಂವಿಧಾನ ದಿನಾಚರಣೆಯ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಜಿಲ್ಲಾಡಳಿತ ಮತ್ತು ಎಲ್ಲರ ಪರವಾಗಿ ಮನವಿ ಮಾಡುವೆ ಎಂದು ಚಿಂತಕಿ ಅನಿತಾ ನವಲಕಲ್ ಅವರು ಸಭೆಗೆ ತಿಳಿಸಿದರು.

ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಸಿಂಧು ರಘು ಎಚ್.ಎಸ್. ಅವರು ಸಂವಿಧಾನ ದಿನಾಚರಣೆಯ ಮಾರ್ಗಸೂಚಿಯ ಸುತ್ತೋಲೆಯನ್ನು ಸಭೆಗೆ ಓದಿ ಹೇಳಿದರು.ಸಭೆಯಲ್ಲಿ ವಿವಿಧ ಸಂಘಟನೆಗಳ ಮುಖಂಡರಾದ ಜಾನ್‌ವೆಸ್ಲಿ, ಗಿರಿಯಪ್ಪ ನೆಲಹಾಳ, ಕರುಣಕುಮಾರ ಕಟ್ಟಿಮನಿ, ಪಿ.ಪ್ರಭಾಕರ, ಪರಶುರಾಮ ಅರೋಲಿ, ಪ್ರಾಣೇಶ ಮಂಚಾಳ, ರವಿ ದಾದಸ, ಎಂ.ವೆಂಕಟೇಶ ಅರೋಲಿಕರ, ನಿವೇದಿತಾ ಎನ್, ಜಿಲ್ಲಾ ಪೊಲೀಸ್ ಇಲಾಖೆಯ ಶಾಂತವೀರ್ ಈ., ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರಾದ ರಾಜೇಂದ್ರ ಜಲ್ದಾರ, ಪುರಸಭೆ ತಹಸೀಲ್ದಾರ ಎಂ.ಡಿ.ಆಸೀಫ್, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಾದ ಶಿವಪ್ಪ ಉಪ್ಪಾಳ, ವಾರ್ತಾ ಇಲಾಖೆಯ ಗವಿಸಿದ್ದಪ್ಪ ಹೊಸಮನಿ, ಆಹಾರ ಇಲಾಖೆಯ ಲೆಕ್ಕಾಧಿಕ್ಷಕರಾದ ಸಿದ್ದಪ್ಪ, ಮಹಾನಗರ ಪಾಲಿಕೆಯ ವಿನೋದಕುಮಾರ ಎಂ., ರಾಯಚೂರು ಸಿಟಿ ಕಾರ್ಪೋರೇಶನ್ ಅಧಿಕಾರಿ ಜೈಪಾಲ ರೆಡ್ಡಿ, ಶಾಲಾ ಶಿಕ್ಷಣ ಇಲಾಖೆಯ ಬಿ ಎನ್ ಕುಮಾರಸ್ವಾಮಿ, ಕಾರ್ಮಿಕ ಇಲಾಖೆಯ ಗಂಗಮ್ಮ, ವಿಕಲಚೇತನರ ಇಲಾಖೆಯ ವಿನಯಕುಮಾರ, ಕೈಮಗ್ಗ ಮತ್ತು ಜವಳಿ ಇಲಾಖೆಯ ರಾಮಕೃಷ್ಣ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

## ರಾಯಚೂರಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಪ್ರಚಾರದ ಕಲಾ ಜಾಥಾಕ್ಕೆ ಚಾಲನೆ

ಕೋಟಿ ರೂ ಬಳಕೆ ಮಾಡಿ ಎಲ್ಲ ಪಂಚ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಗೊಳಿಸಿ ಬದ್ಧತೆಯನ್ನು ಉಳಿಸಿಕೊಂಡಿದೆ. ಈ ಯೋಜನೆಗಳಿಂದ ರಾಜ್ಯದ ಜನತೆಗೆ ಸಾಕಷ್ಟು ಅನುಕೂಲವಾಗಿದೆ. ಈ ಬಗ್ಗೆ ಪ್ರಚಾರ ಕಾರ್ಯಕ್ರಮಗಳು ಜಿಲ್ಲೆಯಲ್ಲಿ ಅಚ್ಚುಕಟ್ಟಾಗಿ ನಡೆಯಬೇಕು ಎಂದರು.

ನಾಗೇಂದ್ರ ಮಟಮಾರಿ ಅವರು ಮಾತನಾಡಿ, ರಾಜ್ಯದ 7 ಕೋಟಿ ಜನರಿಗೆ ಗ್ಯಾರಂಟಿ ಯೋಜನೆಗಳು ಬದುಕು ನೀಡಿದೆ. ರಾಜ್ಯದ ಶೇ.96ರಷ್ಟು ಜನ ಒಂದಲ್ಲಾ ಒಂದು ರೀತಿಯಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳಾಗಿದ್ದಾರೆ. ಈ ಮಾಹಿತಿಯು ಜಿಲ್ಲೆಯ ಪ್ರತಿ ಮನೆಮನೆ ಬಾಗಿಲಿಗೆ ಹೋಗಬೇಕು ಎಂದು ತಿಳಿಸಿದರು.ಪವನ್ ಕಿಶೋರ್ ಪಾಟೀಲ ಅವರು ಮಾತನಾಡಿ, ಪಂಚ ಗ್ಯಾರಂಟಿ ಯೋಜನೆಗಳು ರಾಯಚೂರು ಜಿಲ್ಲೆಯಲ್ಲಿ ಸಹ ಅಚ್ಚುಕಟ್ಟಾಗಿ ಅನುಷ್ಠಾನವಾಗುತ್ತಿವೆ. ಗೃಹಲಕ್ಷ್ಮಿ ಯೋಜನೆಯ ಅನುಷ್ಠಾನದಲ್ಲಿ ಇಡೀ ರಾಜ್ಯದಲ್ಲಿಯೇ ರಾಯಚೂರು ಜಿಲ್ಲೆಗೆ 5ನೇ ಸ್ಥಾನ ಲಭಿಸಿದೆ. ಯುವನಿಧಿ ಅನುಷ್ಠಾನದಲ್ಲಿ ಇಡೀ ರಾಜ್ಯದಲ್ಲಿಯೇ ನಾವು 3ನೇ ಸ್ಥಾನದಲ್ಲಿದ್ದೇವೆ. ಕಲಾ ಜಾಥಾ ತಂಡದಲ್ಲಿರುವ ಎಲ್ಲರೂ ಪ್ರಚಾರ ರಾಯಭಾರಿಗಳು ನಾವು ಎಂದು ಭಾವಿಸಿ ಜಿಲ್ಲೆಯಲ್ಲಿ ಪ್ರಚಾರ ಕಾರ್ಯವನ್ನು ಶಿಸ್ತುಬದ್ಧವಾಗಿ ನಡೆಸಬೇಕು ಎಂದು ಸಲಹೆ ಮಾಡಿದರು.

ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕರಾದ ಡಾ.ಟಿ.ರೋಣಿ ಅವರು ಮಾತನಾಡಿ, ಅರ್ಹ ಪ್ರತಿಯೊಬ್ಬರು ಸಹ ಈ ಪಂಚ ಗ್ಯಾರಂಟಿ ಯೋಜನೆಗಳ ಪಾಲುದಾರರಾಗುವ ನಿಟ್ಟಿನಲ್ಲಿ ವಾರ್ತಾ ಇಲಾಖೆಯಿಂದ ಪ್ರಚಾರ ಕಾರ್ಯಗಳು ವ್ಯವಸ್ಥಿತವಾಗಿ ನಡೆಯಬೇಕು ಎಂದು ತಿಳಿಸಿದರು.ವಾರ್ತಾ ಸಹಾಯಕರಾದ ಗವಿಸಿದ್ದಪ್ಪ ಅವರು ಸ್ವಾಗತಿಸಿ, ಪ್ರಾಸ್ತಾವಿಕ ಮಾತನಾಡಿದರು. ಈ ವೇಳೆ ವಾರ್ತಾ ಇಲಾಖೆಯ ಪ್ರಕಾಶ, ಅಪ್ರೆಂಟಿಸ್ ತರಬೇತುದಾರ ಲವ, ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಹಾಗೂ ಕಲಾವಿದರು ಇದ್ದರು.

## ಸುಕ್ಷೇತ್ರ ಜಡೆಯ ಶಂಕರಲಿಂಗ ದೇವಸ್ಥಾನದಲ್ಲಿ ದೀಪೋತ್ಸವದಿಂದ ಐಶ್ವರ್ಯ, ಆರೋಗ್ಯ ಭಾಗ್ಯ ಪ್ರಾಪ್ತಿ

ಸಮಾಜದ ಯುವ ಮುಖಂಡರು ವಸಂತ ಕುಮಾರ್ ಬಣಗಾರ್ ಸುರಪುರ ಹೇಳಿದರು. ಸುಮಾರು 400ಕ್ಕೂ ಹೆಚ್ಚು ಸದ್ಭಕ್ತರು ಅನ್ನದಾಸೋಹ ಪ್ರಸಾದ ಸ್ವೀಕರಿಸಿದರು. ಈ ಛೆಟ್ಟಿ ಅಮಾವಾಸ್ಯೆಯ ದಾಸೋಹ ಸೇವೆಯನ್ನು ಅಶೋಕ್. ಚಂದ್ರಶೇಖರ್. ಶಶಿಧರ್. ವಿಜಯಕುಮಾರ್. ರಾಜಶೇಖರ್. ಯಾಗಂಟಿ ಕುಟುಂಬದವರಿಂದ ಹಮ್ಮಿಕೊಳ್ಳಲಾಗಿತ್ತು.

ಯಾಗಂಟಿ ಕುಟುಂಬದವರನ್ನು. ಅನ್ನದಾಸೋಹ ಸಂಘಟಕರು ಅವರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಮಲ್ಲಯ್ಯ ಸ್ವಾಮಿ ವಸ್ತ್ರದ. ಶ್ರೀಧರ್ ಮಸ್ಕಿ ಸಾಹಿತಿಗಳು. ಶಂಕರಲಿಂಗಪ್ಪ ಧನ ಶೆಟ್ಟಿ. ವಾಯ್ ಚಳ್ಳಿಮರದ್ ಪಂಚಾಕ್ಷರಿ ಹಿರೇಮಠ್ ಬಸವರಾಜ್ ಹಣಿಮೇಶ್ ಹೂಗಾರ್ ಸಂಕೇತ ಶಿವಪುತ್ರ ಯಾಗಂಟಿ ಭಾರತಿ ಜ್ಯೋತಿಬಸವರಾಜ್ ಹನಮೇಶ್ ಹೂಗಾರ್ ಸಂಕೇತ ಶಿವಪುತ್ರ ಯಾಗಂಟಿ ಭಾರತಿ ಜ್ಯೋತಿ ಮಹಾನಂದ ಶಿಲ್ಪ ಜಯಶ್ರೀ ಯಗಂಟಿ ಇನ್ನು ಹೆಚ್ಚಿನಲ್ಲಿ ನವಲಿ ಸುತ್ತಮುತ್ತಲಿನ ಸದ್ಭಕ್ತರು ಆಗಮಿಸಿದ್ದರು. ಶ್ರೀ ಜಡೇಶಂಕರಲಿಂಗ ದೇವರ ಕೃಪೆಗೆ ಪಾತ್ರರಾದರು.

## ಶ್ರೀಈಶ್ವರ ದೇವಸ್ಥಾನದ 23ನೇ ವಾರ್ಷಿಕೋತ್ಸವ

ಹಿಂದೂಧರ್ಮದ ಮಹಾತ್ವದ ಬಗ್ಗೆ ತಿಳಿಸಬೇಕಾಗಿದೆ ಎಂದು ತಿಳಿಸಿದರು.ಉಪನ್ಯಾಸಕರಾದ ಬಸವರಾಜ ತಡಕಲ್ ಮಸ್ಕಿ ರವರು ಕಾರ್ತಿಕ ಮಾಸದ ಕುರಿತು ಉಪನ್ಯಾಸ ನೀಡಿದರು.ಶ್ರೀ ಈಶ್ವರ ದೇವಸ್ಥಾನದ 23ನೇ ವಾರ್ಷಿಕೋತ್ಸವ ಹಾಗೂ ಕಾರ್ತಿಕ ಮಾಸದ ಅಂಗವಾಗಿ ಬೆಳಿಗ್ಗೆ 5ಕ್ಕೆ ಶ್ರೀ ಈಶ್ವರ ದೇವರ ಮೂರ್ತಿಗೆ ದೇವಸ್ಥಾನದ ಆರ್ಚಕರಾದ ಆಂಜನೇಯ್ಯಸ್ವಾಮಿಗಳವರ ನೇತೃತ್ವದಲ್ಲಿ ರುದ್ರಾಭಿಷೇಕ ಮತ್ತು ಸಹಸ್ರ ಬಿಲ್ವಾರ್ಚನೆ ಹಾಗೂ ರುದ್ರ ಹೋಮ ಹಾಗೂ ಪೂರ್ಣಹುತಿ ನಡೆಯಿತು.ಸಂಜೆ ದೇವಸ್ಥಾನದ ಆವರಣದಲ್ಲಿ ಭಕ್ತರು ಸಹಸ್ರ ದೀಪೋತ್ಸವ ಆಚರಿಸಿದರು . ವೇದಿಕೆಯಲ್ಲಿ ಪಟ್ಟಣದ ವಿವಿಧ ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು. ವಿವಿಧ ನಾಟ್ಯಮಂಡಳಿಗಳವರಿಂದ ಭರತನಾಟ್ಯ ನೃತ್ಯ ಪ್ರದರ್ಶನ ನಡೆಯಿತು,ಶ್ರೀ ಈಶ್ವರ ದೇವಸ್ಥಾನ ಮಂಡಳಿಯ ಗೌರವ ಅಧ್ಯಕ್ಷರಾದ ಶ್ರೀಧರ ಸ್ವಾಮಿ ಕೊಟ್ನೆಕಲ್,ಅಧ್ಯಕ್ಷರಾದ ಬಸವರಾಜಪ್ಪಗೌಡ ಚಿಮ್ಲಪುರ್, ತಾ. ವೀರಶೈವ .ಲಿಂಗಾಯತ ಸಮಾಜದ ಅಧ್ಯಕ್ಷರಾದ ಹರಿಹಾರ ಪಾಟೀಲ್, ಅ.ಭಾ.ವೀ.ಲಿಂ. ಮಹಾಸಭಾ ತಾ.ಅಧ್ಯಕ್ಷರಾದ ಅರುಣ್ ಚಂದಾ, ಹಿರಿಯ ವಕೀಲರಾದ ಎ.ಬಿ.ಉಪಳಮಠ, ಜೆ.ಡಿ.ಎಸ್. ರಾಜ್ಯ ಯುವಘಟಕದ ಉಪಾಧ್ಯಕ್ಷರಾದ ರಾಜಾ ರಾಮಚಂದ್ರನಾಯಕ, ರಾಜಾ ಸುಭಾಶ್ಚಂದ್ರನಾಯಕ, ರೇವಣಸಿದ್ದಯ್ಯಸ್ವಾಮಿ, ಗುಮ್ಮ ಬಸವರಾಜ,ಮೌನೇಶಗೌಡ,ಹೆಚ್,ಶ್ರೀಕಾಂತಗೂಳಿ, ಗಣೇಕಲ್ ಮಲ್ಲನಗೌಡ,ತಿಮ್ಮರೆಡ್ಡಿ ಭೋಗವಾತಿ, ವೀರನಗೌಡ ವಕೀಲರು.ಅದಮ್ ಬೇಗ್,ಡಿ,ಬಸನಗೌಡ, ಹೋಯ್ಸಳ ಸ್ವಾಮಿ,ಜಗದೀಶ ಓತ್ತೂರ್,ಮಲ್ಲಭದ್ರಗೌಡ ಸೇರಿದಂತೆ ಇನ್ನಿತರರು ಇದ್ದರು.

## ಪಾಕ್ ಪರ ಬೇಹುಗಾರಿಕೆ ಮಲ್ಪೆಯಲ್ಲಿ ಇಬ್ಬರ ಸೆರೆ

ಕಳೆದ ಒಂದೂವರೆ ವರ್ಷಗಳಿಂದ ಆರೋಪಿಗಳು ಹಡಗುಗಳಿಗೆ ಸಂಬಂಧಿಸಿದ ಗೋಪ್ಯ ಮಾಹಿತಿ, ರಹಸ್ಯ ತಾಂತ್ರಿಕ ಮಾಹಿತಿಗಳನ್ನು ವಾಟ್ಸಪ್ ಮೂಲಕ ಪಾಕಿಸ್ತಾನದಲ್ಲಿ ಸಂಪರ್ಕದಲ್ಲಿದ್ದವರಿಗೆ ಕಳುಹಿಸುತ್ತಿದ್ದರು ಎಂಬ ಗಂಭೀರ ವಿಚಾರ ಈಗ ಬಯಲಾಗಿದೆ. ಕೇರಳದಲ್ಲಿ ಕೆಲಸ ಮಾಡುವ ಸಮಯದಲ್ಲಿ ರೋಹಿತ್ ಹಲವು ಬಾರಿ ಮಾಹಿತಿ ಹಂಚಿಕೊಂಡಿದ್ದು, ಮಲ್ಪೆಗೆ ಬರುವವರೆಗೂ ಈ ಚಟುವಟಿಕೆ ಮುಂದುವರಿದಿತ್ತು ಎಂಬುದು ತನಿಖೆಯಿಂದ ತಿಳಿದುಬಂದಿದೆ.

ಅನುಮಾನದ ಮೇರೆಗ ಕೊಚ್ಚಿನ್ ಶಿಪ್ ಯಾರ್ಡ್ ಸಿಇಒ ನೀಡಿದ್ದ ದೂರಿನ ಆಧಾರದಲ್ಲಿ ಉಡುಪಿ ಪೊಲೀಸರು ಇಬ್ಬರನ್ನೂ ಬಂಧಿಸಿ ನ್ಯಾಯಾಲಯಕ್ಕೆ ಹಾಜರುಪಡಿಸಿದ್ದಾರೆ. ಅವರ ವಿರುದ್ಧ ದೇಶದ ಸಾರ್ವಭೌಮತೆಗೆ ಧಕ್ಕೆ ತರುವ, ಗೌಪ್ಯ ಮಾಹಿತಿ ಮಾರಾಟ ನಡೆಸಿದ ಆರೋಪಗಳ ಅಡಿ ಪ್ರಕರಣ ದಾಖಲಿಸಲಾಗಿದೆ. ಮಾಹಿತಿ ಹಂಚಿಕೆ ಮಾಡಿ ಹಣ ಪಡೆಯುತ್ತಿದ್ದರೆಂಬ ಅಂಶವೂ ತನಿಖೆಯಿಂದ ಬೆಳಕಿಗೆ ಬಂದಿದೆ.

# ತಾರಕಕ್ಕೇರಿದ ಕುರ್ಚಿ ಕಾದಾಟ ಕೊಡದ ಸಿದ್ದು, ಬಿಡದ ಡಿಕೆಶಿ

ನಡೆಯುತ್ತಿದ್ದ ಕದನ ಈಗ ಬಹಿರಂಗವಾಗಿಯೇ ನಡೆದಿದ್ದು,ಸಿದ್ಧರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ಎರಡೂ ಬಣಗಳು ಈಗ ಬಹಿರಂಗವಾಗಿಯೇ ಕಾರ್ಯತಂತ್ರಗಳನ್ನು ರೂಪಿಸುತ್ತಿದ್ದು, ಅಧಿಕಾರ ಹಂಚಿಕೆ ಈಗ ಕಾಂಗ್ರೆಸ್‌ನಲ್ಲಿ ನಿರ್ಣಯ ಹಂತಕ್ಕೆ ಬಂದು ನಿಂತಿದೆ. ಪಕ್ಷದ ಹೈಕಮಾಂಡ್ ಯಾವ ತೀರ್ಮಾನ ಕೈಗೊಳ್ಳಬೇಕು ಎಂಬ ಗೊಂದಲದಲ್ಲಿದ್ದು, ಹೈಕಮಾಂಡ್‌ನ ಅಡಕತ್ತರಿಯಲ್ಲಿ ಸಿಕ್ಕಿರುವಂತಹ ಪರಿಸ್ಥಿತಿಯಲ್ಲಿದೆ.ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಮುಖ್ಯಮಂತ್ರಿ ಮಾಡಲೇಬೇಕು ಎಂದು ಒಂದು ಬಣ ಎಲ್ಲ ರೀತಿಯ ಕಸರತ್ತು ನಡೆಸಿದ್ದು, ಇಬ್ಬರು ಸಚಿವರು ಸೇರಿದಂತೆ ಎಲ್ಲ ಶಾಸಕರು ನಿನ್ನೆಯೇ ದೆಹಲಿಗೆ ತೆರಳಿ ನಿನ್ನೆ ತಡರಾತ್ರಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನಖರ್ಗೆ ಅವರನ್ನು ಭೇಟಿ ಮಾಡಿ ಅಧಿಕಾರ ಹಂಚಿಕೆಯ ಒಪ್ಪಂದ ಜಾರಿಗೆ ಮನವಿ ಮಾಡಿದ್ದಾರೆ.ಡಿಕೆಶಿ ಆಪ್ತರ ಬಣದಲ್ಲಿ ಗುರುತಿಸಿಕೊಂಡಿರುವ ಸಚಿವ ಚಲುವರಾಯಸ್ವಾಮಿ, ಕುಣಿಗಲ್ ಶಾಸಕ ಹೆಚ್.ಡಿ. ರಂಗನಾಥ್, ಹೊಸಕೋಟೆ ಶಾಸಕ ಶರತ್ ಬಚ್ಚೇಗೌಡ, ಆನೇಕಲ್ ಶಾಸಕ ಶಿವಣ್ಣ, ಶೃಂಗೇರಿ ಶಾಸಕ ರಾಜೇಗೌಡ, ನೆಲಮಂಗಲದ ಶಾಸಕ ಶ್ರೀನಿವಾಸ್, ಗುಬ್ಬಿ ಶಾಸಕ ಎಸ್. ಆರ್.ಶ್ರೀನಿವಾಸ್ ವಿಧಾನ ಪರಿಷತ್ ಸದಸ್ಯ ದಿನೇಶ್ ಗೂಳಿಗೌಡ, ಇವರುಗಳು ನಿನ್ನೆ ತಡರಾತ್ರಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನಖರ್ಗೆ ಅವರನ್ನ ಭೇಟಿ ಮಾಡಿ ಅಧಿಕಾರ ಹಂಚಿಕೆಯ ಬಗ್ಗೆ ಚರ್ಚೆ ನಡೆಸಿದ್ದಾರೆ.

ಡಿಕೆಶಿ ಬಣದ ಶಾಸಕರುಗಳು ದೆಹಲಿಯಲ್ಲಿ ಹೈಕಮಾಂಡ್ ಭೇಟಿ ಮಾಡುತ್ತಿರುವಾಗಲೇ ಬೆಂಗಳೂರಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಆಪ್ತ ವಲಯದಲ್ಲಿ ಗುರುತಿಸಿಕೊಂಡಿರುವ ಸಚಿವರಾದ ಡಾ.ಜಿ. ಪರಮೇಶ್ವರ್, ಡಾ.ಹೆಚ್.ಸಿ.ಮಹದೇವಪ್ಪ, ಸತೀಶ್ ಜಾರಕಿಹೊಳಿ, ದಿನೇಶ್ ಗುಂಡೂರಾವ್, ವೆಂಕಟೇಶ್, ಮಾಜಿ ಸಚಿವ ಕೆ.ಎನ್.ರಾಜಣ್ಣ ಸೇರಿದಂತೆ ಹಲವರು ಸಚಿವ ಸತೀಶ್ ಜಾರಕಿಹೊಳಿ ಅವರ ನಿವಾಸದಲ್ಲಿ ಡಿನ್ನರ್ ಮೀಟಿಂಗ್ ನಡೆಸಿ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಅಧಿಕಾರದಲ್ಲಿ ಅಬಾಧಿತವಾಗಿ ಮುಂದುವರೆಯಲು ಏನೆಲ್ಲಾ ಕಾರ್ಯತಂತ್ರಗಳನ್ನು ರೂಪಿಸಬೇಕು ಎಂಬ ಬಗ್ಗೆ ಸುದೀರ್ಘ ಸಮಾಲೋಚನೆ ನಡೆಸಿದ್ದಾರೆ.ಡಿಕೆಶಿ ಬಣ ದೆಹಲಿಗೆ ಹೋಗಿರುವ ಬೆನ್ನಲ್ಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಪರ ದೆಹಲಿಗೆ ಹೋಗಿ ವರಿಷ್ಠರನ್ನ ಭೇಟಿ ಮಾಡಿ ಗೊಂದಲ ಪರಿಹರಿಸುವಂತೆ ವರಿಷ್ಠರಿಗೆ ಮನವಿ ಮಾಡುವ ಬಗ್ಗೆಯೂ ಇವರುಗಳು ಡಿನ್ನರ್ ಮೀಟಿಂಗ್‌ನಲ್ಲಿ ಚರ್ಚೆಲಾಗಿದೆ ಎಂದು ಹೇಳಲಾಗಿದೆ.ಕಾಂಗ್ರೆಸ್‌ನಲ್ಲಿ ಅಧಿಕಾರ ಹಂಚಿಕೆಯ ಕದನ ಬಿರುಸಾಗುತ್ತಿದ್ದಂತೆಯೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ಆಪ್ತಚವಲಯಲ್ಲಿ ಗುರುತಿಸಿಕೊಂಡಿರುವ ಶಾಸಕರು ಹಾಗೂ ಸಚಿವರುಗಳು ಅಲರ್ಟ್ ಆಗಿದ್ದು, ದೆಹಲಿ ಯಾತ್ರೆಗೆ ಸಜ್ಜಾಗಿದ್ದಾರೆ.ದೆಹಲಿಯಲ್ಲಿ ನಿನ್ನೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನಖರ್ಗೆ ಅವರನ್ನು ಭೇಟಿ ಮಾಡಿದ್ದ ಡಿಕೆಶಿ ಬಣದ ಸಚಿವರು, ಶಾಸಕರುಗಳು, ದೆಹಲಿಯಲ್ಲಿ ಮೊಕ್ಕಾಂ ಹೂಡಿದ್ದ ಇಂದು ಡಿಕೆಶಿ ಆಪ್ತವಲಯದ ಮತ್ತಷ್ಟು ಶಾಸಕರು ಅದರಲ್ಲೂ ಒಕ್ಕಲಿಗ ಸಮುದಾಯದ ಶಾಸಕರು ದೆಹಲಿಗೆ ತೆರಳಿ ವರಿಷ್ಠರನ್ನು ಭೇಟಿ ಮಾಡುವ ಸಾಧ್ಯತೆಗಳಿವೆ.

**ಖರ್ಗೆ ಇಂದು ಬೆಂಗಳೂರಿಗೆ**–ರಾಜ್ಯ ಕಾಂಗ್ರೆಸ್‌ನಲ್ಲಿ ಚಟುವಟಿಕೆಗಳು ಬಿರುಸಾಗಿರುವಾಗಲೇ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನಖರ್ಗೆ ಅವರು ನಾಳೆ ಬೆಂಗಳೂರಿಗೆ ಬರುವ ಸಾಧ್ಯತೆಗಳಿದ್ದು ಅವರನ್ನು ಭೇಟಿ ಮಾಡಲು ಸಿದ್ಧರಾಮಯ್ಯ ಮತ್ತು ಡಿಕೆಶಿ ಬಣದ ಸಚಿವರುಗಳು, ಶಾಸಕರು ಮುಂದಾಗಿದ್ದಾರೆ. ಇಂದು ಖರ್ಗೆ ಬೆಂಗಳೂರಿಗೆ ಬರುತ್ತಿರುವ ಹಿನ್ನಲೆಯಲ್ಲಿ ದೆಹಲಿಯಲ್ಲಿರುವ ಡಿಕೆಶಿ ಬಣದ ಶಾಸಕರು ಬೆಂಗಳೂರಿಗೆ ವಾಪಸ್ಸಾಗಿ ಮತ್ತಷ್ಟು ಶಾಸಕರ ಜತೆಗೂಡಿ ಖರ್ಗೆ ಅವರನ್ನು ಭೇಟಿ ಮಾಡುವರು ಎಂದು ಹೇಳಲಾಗಿದೆ.ಚಾಮರಾಜನಗರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನನ್ನ ಅಧಿಕಾರ ಈಗಲೂ ಭವಿಷ್ಯದಲ್ಲೂ ಗಟ್ಟಿ. ಮುಂದಿನ ಬಜೆಟ್‌ನ್ನು ನಾನೇ ಮಂಡಿಸುತ್ತೇನೆ ಎಂದು ದೃಢವಾಗಿ ಹೇಳಿದ ನಂತರ ಕಾಂಗ್ರೆಸ್‌ನಲ್ಲಿ ಅಧಿಕಾರ ಹಂಚಿಕೆಯ ಕದನ ಬಿರುಸಾಗಿ ಹೈಕಮಾಂಡ್ ಒಂದು ತೀರ್ಮಾನ ಕೈಗೊಳ್ಳಲೇಬೇಕಾದ ಪರಿಸ್ಥಿತಿ ಸೃಷ್ಟಿಯಾಗಿದೆ.ಕೆಲ ದಿನಗಳ ಹಿಂದೆ ದೆಹಲಿಗೆ ತೆರಳಿದ್ದ ಮುಖ್ಯಮಂತ್ರಿ ಸಿದ್ಧರಾಮಯ್ಯ, ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್‌ಗಾಂಧಿ ಅವರನ್ನು ಭೇಟಿ ಮಾಡಿ ಸಂಪುಟ ಪುನಾರಚನೆ ಬಗ್ಗೆ ಚರ್ಚಿಸಿದ್ದರು. ಆ ಸಂದರ್ಭದಲ್ಲಿ ರಾಹುಲ್‌ಗಾಂಧಿ ಅವರು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನಖರ್ಗೆ ಅವರನ್ನು ಭೇಟಿ ಮಾಡಿ ಚರ್ಚಿಸುವಂತೆ ಸೂಚಿಸಿದ್ದರು. ಅದರಂತೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನಖರ್ಗೆ ಅವರನ್ನು ದೆಹಲಿಯಲ್ಲಿ ಭೇಟಿ ಮಾಡಿ ಸಂಪುಟ ಪುನಾರಚನೆ ಬಗ್ಗೆ ಚರ್ಚಿಸಿದ್ದರು. ಆಗ ಖರ್ಗೆ ಅವರು ರಾಹುಲ್‌ಗಾಂಧಿ ಅವರ ಜತೆ ಚರ್ಚಿಸಿ ಒಂದು ತೀರ್ಮಾನಕ್ಕೆ ಬರುವುದಾಗಿ ಹೇಳಿದ್ದರು.ನಂತರ ಡಿ.ಕೆ. ಶಿವಕುಮಾರ್ ಸಹ ಖರ್ಗೆ ಅವರನ್ನು ಭೇಟಿ ಮಾಡಿ ಎಲ್ಲ ವಿಚಾರಗಳ ಬಗ್ಗೆ ಚರ್ಚಿಸಿದ್ದರು.ರಾಜ್ಯ ಕಾಂಗ್ರೆಸ್‌ನಲ್ಲಿ ಅಧಿಕಾರ ಹಂಚಿಕೆಯ ಕದನ ಬಿರುಸಾಗಿರುವಾಗಲೇ ಹೈಕಮಾಂಡ್ ಯಾವ ನಿರ್ಧಾರ ಕೈಗೊಳ್ಳುತ್ತದೆ ಎಂಬುದರತ್ತ ಎಲ್ಲರ ಚಿತ್ತ ನೆಟ್ಟಿದ್ದು, ಹೈಕಮಾಂಡ್‌ನ ತೀರ್ಮಾನ ಕುತೂಹಲ ಮೂಡಿಸಿದೆ.

**ಜಿಲ್ಲೆಗೆ ಸಚಿವ ಸ್ಥಾನ ಬೇಡಿಕೆ**–ಚಿಕ್ಕಮಗಳೂರು ಜಿಲ್ಲೆಗೆ ಸಚಿವ ಸ್ಥಾನ ನೀಡುವಂತೆ ಮನವಿ ಮಾಡಲು ಹೈಕಮಾಂಡ್‌ನ್ನು ಭೇಟಿಮಾಡಿದ್ದೆ ಎಂದು ಶೃಂಗೇರಿ ಶಾಸಕ ರಾಜೇಗೌಡ ಹೇಳಿದ್ದಾರೆ.ದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೆಹಲಿಗೆ ಬಂದಿರುವ ಒಕ್ಕಲಿಗ ಶಾಸಕರ ಜತೆ ನಾನು ಬಂದಿಲ್ಲ.ಚಿಕ್ಕಮಗಳೂರುಜಿಲ್ಲೆಗೆ ಸಚಿವ ಸ್ಥಾನ ನೀಡುವಂತೆ ಹೈಕಮಾಂಡ್‌ಗೆ ಮನವಿ ಮಾಡಲು ಬಂದಿದ್ದೇನೆ. ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನಖರ್ಗೆ ಹಾಗೂ ಕೆ.ಸಿ.ವೇಣುಗೋಪಾಲ್ ಅವರನ್ನ ಭೇಟಿ ಮಾಡಿ ಚರ್ಚಿಸಿದ್ದೇನೆ.

**ಅಧಿಕಾರ ಹಂಚಿಕೆಯ ವಿಚಾರ ನನಗೆ ಗೊತ್ತಿಲ್ಲ**. ನಾನು ಖರ್ಗೆ ಅವರನ್ನು ಭೇಟಿ ಮಾಡಲು ಹೋದಾಗ ಅಲ್ಲಿ ಕೆಲ ಶಾಸಕರಿದ್ದರು ಅಷ್ಟೇ ಎಂದು ಹೇಳಿದ್ದಾರೆ.ಹೈಕಮಾಂಡ್ ಗೊಂದಲ ನಿವಾರಿಸಲಿ–ಅಧಿಕಾರ ಹಂಚಿಕೆಯ ಹೈ ಕಮಾಂಡ್ ಗೊಂದಲ ನಿವಾರಿಸಬೇಕು, ಗೊಂದಲವನ್ನು ಹೈಕಮಾಂಡ್ ನಿವಾರಿಸಬೇಕು ಎಂದು ಮಾಗಡಿಯ ಕಾಂಗ್ರೆಸ್ ಶಾಸಕ ಹೆಚ್.ಸಿ.ಬಾಲಕೃಷ್ಣ ಒತ್ತಾಯಿಸಿದ್ದಾರೆ.ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಧಿಕಾರ ಹಂಚಿಕೆಯ ಬಗ್ಗೆ ನಮಗೇನೂ ಮಾಹಿತಿ ಇಲ್ಲ. ನಾಲ್ಕು ಗೋಡೆಗಳ ಮಧ್ಯೆ ಏನು ನಡೆದಿದೆಯೋ ನಮಗೆ ಗೊತ್ತಿಲ್ಲ. ಹಾಗಾಗಿ ಹೈಕಮಾಂಡ್ ಅಧಿಕಾರ ಹಂಚಿಕೆಯ ಗೊಂದಲದ ಬಗ್ಗೆ ಸ್ಪಷ್ಟನೆ ನೀಡಿ ಅದನ್ನು ಪರಿಹರಿಸಬೇಕು ಎಂದರು.ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆಯಲ್ಲಿ ಈ ಬಗ್ಗೆ ಸ್ಪಷ್ಟನೆ ನೀಡಿದರೆ ಒಳ್ಳೆಯದು ಎಂದು ಅವರು ಹೇಳಿದರುಉಪಮುಖ್ಯಮಂತ್ರಿಯಾಗಿರುವ ಡಿ.ಕೆ. ಶಿವಕುಮಾರ್ ಹೈಕಮಾಂಡ್‌ನ್ನು ನಂಬಿದ್ದಾರೆ. ಶಾಸಕರಿಗಿಂತ ಅವರಿಗೆ ಹೈಕಮಾಂಡ್ ಮೇಲೆ ಹೆಚ್ಚು ನಂಬಿಕೆ ಹೊಂದಿದ್ದಾರೆ. ಏನೇ ಇರಲಿ ಹೈಕಮಾಂಡ್ ಅಧಿಕಾರ ಹಂಚಿಕೆಯ ಗೊಂದಲದ ಬಗ್ಗೆ ಸ್ಪಷ್ಟನೆ ನೀಡಬೇಕು ಎಂದು ಅವರು ಹೇಳಿದರು.

**ಹೈಕಮಾಂಡ್‌ಗೆ ಸಿಎಂ ಕರೆ**–ರಾಜ್ಯ ಕಾಂಗ್ರೆಸ್‌ನಲ್ಲಿ ಅಧಿಕಾರ ಹಂಚಿಕೆಗೆ ಸಂಬಂಧಿಸಿದಂತೆ ಚಟುವಟಿಕೆಗಳು ತಾತಕಕ್ಕೇರಿರುವ ಬೆನ್ನಲ್ಲೇ ಹೈಕಮಾಂಡ್‌ನ್ನು ಸಂಪರ್ಕಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಎಲ್ಲ ಗೊಂದಲಗಳಿಗೂ ತೆರೆ ಎಳೆಯುವಂತೆ ಮನವಿ ಮಾಡಿದ್ದಾರೆ. ಇಂದು ಬೆಳಿಗ್ಗೆ ದೂರವಾಣಿ ಮೂಲಕ ಪಕ್ಷದ ವರಿಷ್ಠರ ಸಂಪರ್ಕಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಎಲ್ಲಾ ಬೆಳವಣಿಗೆಗಳನ್ನ ಗಮನಕ್ಕೆ ತಂದು ಗೊಂದಲ ನಿವಾರಿಸುವಂತೆ ಮನವಿ ಮಾಡಿದರು ಎಂದು ಹೇಳಲಾಗಿದೆ.ಈ ಬೆಳವಣಿಗೆಯ ಮಧ್ಯೆಯೇ ದೆಹಲಿಯಲ್ಲಿರುವ ಸಚಿವ ಚೆಲುವರಾಯಸ್ವಾಮಿ ಸೇರಿದಂತೆ ಕೆಲವು ಶಾಸಕರು ದೂರವಾಣಿ ಮೂಲಕ ಸಂಪರ್ಕಿಸಿದ ಮುಖ್ಯ ಮಂತ್ರಿ ಸಿದ್ದರಾಮಯ್ಯ ದೆಹಲಿಗೆ ಹೋಗಿರುವ ಕಾರಣದ ಬಗ್ಗೆ ಪ್ರಶ್ನಿಸಿದ್ದು ಕೇಂದ್ರ ಕೃಷಿ ಸಚಿವರನ್ನ ಭೇಟಿ ಮಾಡಲು ದೆಹಲಿಗೆ ಬಂದಿರುವುದಾಗಿ ಸಮಜಾಯಿಷಿ ನೀಡಿದರು ಎನ್ನಲಾಗಿದೆ.

## ಎಲ್ಲ ಅಂಗನವಾಡಿಗಳಲ್ಲೂ ಶಾಲಾ ಪೂರ್ವ ಚಟುವಟಿಕೆಗಳು ಅತ್ಯುತ್ತಮವಾಗಿ ನಡೆಯಲಿ

ಸಂಬಂಧಿಸಿದಂತೆ ಮಕ್ಕಳು ಹಾಡಿನ ಮೂಲಕ ಪ್ರದರ್ಶಿಸಿದ್ದನ್ನು ಗಮನಿಸಿ ಸಂತಷ ವ್ಯಕ್ತಪಡಿಸಿದರು. ಕ್ರಿಯಾಶೀಲರಾಗಿರುವ ಅಂಗನವಾಡಿ ಕಾರ್ಯಕರ್ತೆಯರಿಗೆ ಅಭಿನಂದಿಸಿದರು. ನಮ್ಮ ದೇಶದಲ್ಲಿ ಈ ರೀತಿಯಾಗಿ ಅಂಗನವಾಡಿ ಕೇಂದ್ರಗಳು ಉತ್ತಮವಾಗಿ ಕಾರ್ಯನಿರ್ವಹಣೆಯಾಗಬೇಕಿದೆ ಎಂದು ಸಲಹೆ ಮಾಡಿದರು.ಬಳಿಕ ಅವರು ರಾಯಚೂರು ನಗರದ ರಿಮ್ಸ್ ಆಸ್ಪತ್ರೆಯ ರಾಯಚೂರು ವಿಜ್ಞಾನ ಸಂಶೋಧನಾ ಕೇಂದ್ರ ರಿಮ್ಸ್ ಆಸ್ಪತ್ರೆಯಲ್ಲಿ ನಡೆಯುವ ಒನ್ ಸ್ಟಾಪ್ ಸೆಂಟರ್‌ಗೆ ಭೇಟಿ ನೀಡಿದರು. ಹೊಸದಾಗಿ ನಿರ್ಮಿಸಿದ ಕಟ್ಟಡವನ್ನು ಪರಿಶೀಲಿಸಿ ಕಟ್ಟಡದ ಹೊರಭಾಗದ ಗೋಡೆಯ ಮೇಲೆ ಮಹಿಳೆಯರ ಕಾರ್ಯಕ್ರಮಗಳ ಬಗ್ಗೆ ಸಹಾಯವಾಣಿ ಸಂಖ್ಯೆಗಳ ಬಗ್ಗೆ ಪ್ರಚಾರದ ಬರೆಹ ಬರೆಯಿಸಲು ಸೂಚನೆ ನೀಡಿದರು.ಸಖಿ ಒನ್ ಸ್ಟಾಪ್ ಸೆಂಟರ್ ಡ್ಯಾಶ್ ಬೋರ್ಡ್ ವೀಕ್ಷಿಸಿ, ಪ್ರತಿದಿನ ಅಪಡೇಟ್ ಮಾಡಲು ತಿಳಿಸಿದರು.

05 ವರ್ಷಗಳಲ್ಲಿ ದಾಖಲಾದ ಕೆಸ್‌ಗಳ ಬಗ್ಗೆ ಪರಿಶೀಲಿಸಿ, ಸಖಿ ಒನ್ ಸ್ಟಾಪ್ ಸೆಂಟರ್ ನಲ್ಲಿ ಕಾರ್ಯನಿರ್ವಹಿಸುತ್ತಿರುವ 08 ಜನ ಸಿಬ್ಬಂದಿಯ ಮಾಹಿತಿ ಪಡೆದುಕೊಂಡರು.ಸಹಾಯಕ್ಕಾಗಿ ಬರುವ ಸಂಕಟದಲ್ಲಿರುವ ಮಹಿಳೆಯರಿಗೆ ಉತ್ತಮ ರೀತಿಯಲ್ಲಿ ಸ್ಪಂದಿಸಲು ಮತ್ತು ಅಗತ್ಯ ಕಾನೂನು ನೆರವು ನೀಡಲು ಸಿಬ್ಬಂದಿ ವರ್ಗದವರಿಗೆ ಸೂಚನೆ ನೀಡಿದರು. ಆಡಳಿತಾಧಿಕಾರಿಗಳು, ಮಹಿಳೆಯರಿಗೆ ಉತ್ತಮ ಮಾರ್ಗದರ್ಶನ ನೀಡುವ ನಿಟ್ಟಿನಲ್ಲಿ ಅಚ್ಚುಕಟ್ಟಾಗಿ ಕೆಲಸ ನಿರ್ವಹಿಸಲು ಮತ್ತು ಮೇಲ್ವಿಚಾರಣೆ ಮಾಡಬೇಕು ಎಂದು ತಿಳಿಸಿದರು. ಕೆಲಸದಲ್ಲಿ ಯಾವುದೇ ರೀತಿಯ ನಿರ್ಲಕ್ಷತೆಯನ್ನು ಸಹಿಸಲಾಗುವುದಿಲ್ಲ ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಬಳಿಕ ಎಂ.ಎಸ್.ಪಿ.ಟಿ.ಸಿ ಕೇಂದ್ರಕ್ಕೆ ಭೇಟಿ ನೀಡಿದರು. ಕೇಂದ್ರದಲ್ಲಿದ್ದ ಆಹಾರದ ಗುಣಮಟ್ಟದ ಬಗ್ಗೆ ಪರಿಶೀಲಿಸಿದರು. ಆಹಾರ ಖರೀದಿಸುವ ಪ್ರಕ್ರಿಯೆಯ ಬಗ್ಗೆ ತಿಳಿದುಕೊಂಡರು. ಆಹಾರದ ಪೊಟ್ಟಣಗಳ ಸಿದ್ದಪಡಿಸುವಿಕೆ ಮತ್ತು ಪೊಟ್ಟಣದಲ್ಲಿ ಇರಿಸಿದ ಆಹಾರ ಪದಾರ್ಥಗಳ ಸರಿಯಾದ ಪ್ರಮಾಣದ ತೂಕದ ಬಗ್ಗೆ ಎಂ.ಎಸ್.ಪಿ.ಟಿ.ಸಿ ಯ ಸದಸ್ಯರೊಂದಿಗೆ ಚರ್ಚಿಸಿದರು. ನಿಮಗೆ ಸರಿಯಾದ ಸಮಯಕ್ಕೆ ಗೌರವಧನ ಸಿಗುತ್ತಿದೆಯೇ ಎಂದು ಸಿಬ್ಬಂದಿಗೆ ಕೇಳಿದರು. ಎಂ.ಎಸ್.ಪಿ.ಟಿ.ಸಿಯಲ್ಲಿದ್ದ ಯಂತ್ರಗಳ ಬಗ್ಗೆ ಇದೆ ವೇಳೆ ಪರಿಶೀಲಿಸಿದರು.ಬಳಿಕ, ನಗರದ ಸ್ವಾಧಾರ ಕೇಂದ್ರಕ್ಕೆ ಭೇಟಿ ನೀಡಿ, ಕಟ್ಟಡ ನಿರ್ಮಾಣ, ವಿನ್ಯಾಸದ ಬಗ್ಗೆ ಮಹಿಳಾ ಮಂಡಲದ ಸದಸ್ಯರಿಗೆ ವಿಚಾರಿಸಿದರು. ಸ್ವಾಧಾರ ಕೇಂದ್ರದಲ್ಲಿ ದಾಖಲಾಗಿರುವ ಸಂಕಷ್ಟ ಮಹಿಳೆಯರನ್ನು ಭೇಟಿ ಮಾಡಿ ಆರೋಗ್ಯದ ಬಗ್ಗೆ ಮತ್ತು ಅವರಿಗೆ ನೀಡಲಾಗುವ ಊಟೋಪಚಾರ, ದಿನನಿತ್ಯದ ಬಳಕೆ ಸಾಮಗ್ರಿಗಳ ಬಗ್ಗೆ ಹಾಗೂ ಇನ್ನಿತರ ಸೌಲಭ್ಯಗಳನ್ನು ಸರಿಯಾಗಿ ದೊರೆಯುತ್ತಿದೆಯೇ ಎಂದು ವಿಚಾರಿಸಿದರು. ಸ್ವಾಧಾರ ಕೇಂದ್ರವನ್ನು ಸ್ವಚ್ಛತೆಯಿಂದ ಇಟ್ಟುಕೊಳ್ಳಲು ಮತ್ತು ಮಹಿಳೆಯರಿಗೆ ಅಗತ್ಯ ತರಬೇತಿ ನೀಡುವ ನಿಟ್ಟಿನಲ್ಲಿ ಸಂಸ್ಥೆಯು ಕರ್ತವ್ಯ ನಿರ್ವಹಿಸಬೇಕು ಎಂದು ತಿಳಿಸಿದರು.ಸ್ವಾಧಾರ ಕೇಂದ್ರದಿಂದ ಹೊರಗಡೆ ಹೋದ ಮೇಲೆ ಆರ್ಥಿಕವಾಗಿ ಸ್ವಾವಲಂಭಿಯಾಗಿ ಬದುಕಲು ಅಗತ್ಯವಿರುವ ತರಬೇತಿ ಪಡೆದುಕೊಳ್ಳಲು, ಇನ್ನು ಹೆಚ್ಚಿನ ವಿದ್ಯಾಭ್ಯಾಸ ಮಾಡುವ ಇಚ್ಛೆಯಿದ್ದಲ್ಲಿ ಶಿಕ್ಷಣದ ಬಗ್ಗೆ ಗಮನ ಹರಿಸಲು ಮತ್ತು ಜೀವನವನ್ನು ಸುಂದರವಾಗಿ ರೂಪಿಸಿಕೊಳ್ಳಲು ಪ್ರಯತ್ನಿಸಬೇಕೆಂದು ಇದೆ ವೇಳೆ ಮಹಿಳೆಯರಿಗೆ ಪ್ರಿತಮ್ ಬಿ.ಯಶವಂತ ಅವರು ಸಲಹೆ ಮಾಡಿದರು.

ಈ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ರಾಯಚೂರು ಜಿಲ್ಲಾ ಉಪ ನಿರ್ದೇಶಕರಾದ ನವೀನಕುಮಾರ ಹಾಗೂ ಇನ್ನೀತರರು ಇದ್ದರು.

# ಮೌಲ್ಯಗಳು ಮತ್ತು ಬದುಕು

ಬೋರ್ಡಿಗೆ ಬೆನ್ನು ಮಾಡಿ ನಿಂತಿದ್ದ ಆ ಶಿಕ್ಷಕಿ ತನ್ನ ವಿದ್ಯಾರ್ಥಿಗಳನ್ನು ಉದ್ದೇಶಿಸಿ ವಿಷ ಎಂದರೇನು ? ಎಂದು ಕೇಳಿದರು. ವಿದ್ಯಾರ್ಥಿಗಳು ಪರಸ್ಪರ ಮುಖ ನೋಡಿಕೊಂಡರೆ ಹೊರತು ಅವರಿಗೆ ಉತ್ತರ ಗೊತ್ತಾಗಲಿಲ್ಲ. ನಮ್ಮ ಅಗತ್ಯಕ್ಕಿಂತ ಹೆಚ್ಚಾಗಿ ನಾವು ಸೇವಿಸುವ ಆಹಾರ, ಬಳಸುವ ವಸ್ತು, ಇಟ್ಟುಕೊಳ್ಳುವ ಪ್ರತಿಯೊಂದು ವಸ್ತು ವಿಷವಾಗಿರುತ್ತದೆ.

ಎಷ್ಟೋ ಜನರ ಪಾಲಿಗೆ ಹಣವೇ ವಿಷ ಆಗಬಹುದು. ಮತ್ತೆ ಕೆಲವರಿಗೆ ಅಧಿಕಾರ ವಿಷವಾಗಬಹುದು ಮತ್ತೆ ಕೆಲವರಿಗೆ ಅವರು ಸೇವಿಸುವ ಆಹಾರವೇ ವಿಷವಾಗಿ ಪರಿಣಮಿಸಬಹುದು. ನಮ್ಮ ದುರಾಸೆ, ಆಲಸ್ಯ, ಅತಿಯಾದ ಪ್ರೀತಿ, ಮಹತ್ವಕಾಂಕ್ಷೆ, ಆಸೆ ಹೀಗೆ ಎಲ್ಲವೂ ವಿಷವಾಗಬಹುದು.ಒಬ್ಬ ವಿದ್ಯಾರ್ಥಿ ಎದ್ದು ನಿಂತು ಭಯ ಕೂಡ ವಿಷದ ಸಾಲಿನ'ಲ್ಲಿಯೇ ಬರುತ್ತದೆಯೇ ಎಂದು ಕೇಳಿದ. ಕೆಲವೊಮ್ಮೆ ಹೌದು.ನಮಗೆ ಗೊತ್ತಿಲ್ಲದ ವ್ಯಕ್ತಿಗಳನ್ನು ನಾವು ಒಪ್ಪಿಕೊಳ್ಳಲು ತೊಡಗಿದಾಗ ಅದೊಂದು ರೀತಿಯ ಸಾಹಸವಾಗಿ ಪರಿಣಮಿಸುತ್ತದೆ.

ಹಾಗಾದರೆ ಅಸೂಯೆ ಎಂದರೇನು? ಎಂದು ಮತ್ತೊಬ್ಬ ವಿದ್ಯಾರ್ಥಿಯನ್ನು ಕೇಳಿದ.ಬೇರೊಬ್ಬರಲ್ಲಿ ಇರುವ ಒಳ್ಳೆಯ ಗುಣಗಳನ್ನು ಗುರುತಿಸಲಾಗದ ಅಸಮರ್ಥತೆ ನಮ್ಮಲ್ಲಿ ಅಸೂಯೆಯನ್ನು ಹುಟ್ಟು ಹಾಕುತ್ತದೆ. ಬದುಕು ಬೇರೆ ಯವರಿಗೆ ಕೊಡ ಮಾಡಿದ ಆಶೀರ್ವಾದಗಳನ್ನು ನೀನು ಸಂತಸದಿಂದ ಎದುರುಗೊಂಡರೆ ಅಸೂಯೆ ಪ್ರೇರಣೆಯಾಗಿ ಬದಲಾಗುತ್ತದೆ ಎಂದು ಶಿಕ್ಷಕಿ ಹೇಳಿದರು ಹಾಗಾದರೆ ಸಿಟ್ಟು? ಎಂದು ಮತ್ತೋರ್ವ



ವಿದ್ಯಾರ್ಥಿ ತನ್ನ ಕೈಯೆತ್ತಿ ಪ್ರಶ್ನೆ ಕೇಳಿದ.ನಾವು ನಡೆಯಬಾರದು ಎಂದು ಯಾವುದನ್ನು ಬಯಸುತ್ತೇ ವೆಯೋ ಅದನ್ನು ನಿಯಂತ್ರಿಸಲು ಸಾಧ್ಯವಾಗದೆ ಹೋದಾಗ ನಮ್ಮಲ್ಲಿ ಕೋಪ ಉಂಟಾಗುತ್ತದೆ.

ನಮ್ಮ ಮಿತಿಗಳನ್ನು ಮೀರಿ ತಮ್ಮ ಶಕ್ತಿಯನ್ನು ಹೊಂದಿರುವುದು ಕೋಪದ ಗುಣವಾಗಿದ್ದು.... ಎಲ್ಲಾ ಸಮಯದಲ್ಲೂ ಎಲ್ಲಾ ವಿಷಯುಗಳನ್ನು ನಮ್ಮ ನಿಯಂತ್ರಣ ದಲ್ಲಿಟ್ಟುಕೊಳ್ಳಲು ಸಾಧ್ಯವಾಗುವುದಿಲ್ಲ ಎಂಬ ಅರಿವನ್ನು ನಾವು ಹೊಂದಿದ್ದರೆ ಕೋಪದ ಬೆಂಕಿಯನ್ನು ಆರಿಸುವ ಶಾಂತಿ ಮತ್ತು ಸಮಾಧಾನ ನಮ್ಮದಾಗುತ್ತದೆ ಕೊನೆಯದಾಗಿ ಮತ್ತೊಬ್ಬ ವಿದ್ಯಾರ್ಥಿ ಹಾಗಾದರೆ ದ್ವೇಷ ಎಂದರೇನು ? ಎಂದು ಕೇಳಿದ. ಒಂದು ಕ್ಷಣ ಸುಮ್ಮನಿದ್ದ ಶಿಕ್ಷಕಿ ಇಡೀ ಕೋಣೆಯನ್ನು ಒಮ್ಮೆ ಸಂಪೂರ್ಣವಾಗಿ ದಿಟ್ಟಿಸಿ ನೋಡಿ ಬೇರೊಬ್ಬ ವ್ಯಕ್ತಿಯನ್ನು ಅವರು ಇರುವ ರೀತಿಯಲ್ಲಿ ಒಪ್ಪಿಕೊಳ್ಳದೆ ಇರುವುದು ದ್ವೇಷಕ್ಕೆ ಕಾರಣವಾಗುತ್ತದೆ. ಒಂದೊಮ್ಮೆ ನಾವು ಒಪ್ಪಿಕೊಂಡದ್ದೇ ಆದರೆ ಯಾವುದೇ ರೀತಿಯ ಒಳ ಒಪ್ಪಂದಗಳು ಇಲ್ಲದೆ ನಮ್ಮ ದ್ವೇಷ ಸಹಾನುಭೂತಿಯಾಗಿ ಬದಲಾಗುತ್ತದೆ. ಪ್ರೀತಿಗೆ ಮತ್ತೊಂದು ಹೆಸರೇ ಸಹಾನುಭೂತಿ ಎಂದು ಶಿಕ್ಷಕಿ ಹೇಳಿದಾಗ ತರಗತಿಯಲ್ಲಿನ ಎಲ್ಲಾ ಮಕ್ಕಳು ತಲೆದೂಗಿದರು. ಅದೆಷ್ಟು ಸುಂದರವಾದ ವಾಕ್ಯಗಳು ಅಲ್ಲವೇ! ಭಯವನ್ನು ಧೈರ್ಯದಿಂದ,, ಸಿಟ್ಟನ್ನು ಸಮಾಧಾನದಿಂದ, ದ್ವೇಷವನ್ನು ಪ್ರೀತಿಯಿಂದ, ಅಸೂಯೆಯನ್ನು ಸಾಮರ್ಥ್ಯದಿಂದ ನಾವು ಮೆಟ್ಟಿದಾಗ ಮಾತ್ರ ನಮ್ಮ ಬದುಕು ಬದಲಾಗುತ್ತದೆ. ಬದುಕಿನಲ್ಲಿ ರಾಗ–ದ್ವೇಷ, ಸಿಟ್ಟು–ಸೆಡವು, ಪ್ರೀತಿ–ಕೋಪ ನಲಿವು ನೋವು ಎಲ್ಲವೂ ಬೇಕು.... ಅವುಗಳು ಪರಸ್ಪರ ವಿರುದ್ಧವಾದ ಗುಣಗಳಾದರೂ ಕೂಡ ಒಂದರಲ್ಲಿ ನಕಾರಾತ್ಮಕತೆ ಇದ್ದರೆ ಮತ್ತೊಂದರಲ್ಲಿ ಸಕಾರಾತ್ಮಕತೆ ಇದೆ.

ಕತ್ತಲು ಇದ್ದಾಗಲೇ ನಮಗೆ ಬೆಳಕಿನ ಮಹತ್ವ ಗೊತ್ತಾಗುತ್ತದೆ.. .ಅಂತೆಯೇ ಇಂತಹ ನಕಾರಾತ್ಮಕ ಗುಣಗಳು ಇದ್ದಾಗಲೇ ಸಕಾರಾತ್ಮಕ ಶಕ್ತಿಯ ಮಹತ್ವದ ಅರಿವಾಗುತ್ತದೆ. ನಮ್ಮ ಮಕ್ಕಳು ಓದಿ ಒಳ್ಳೆಯ ಉದ್ಯೋಗವನ್ನು ತನ್ಮೂಲಕ ಹಣವನ್ನು ಗಳಿಸಬಹುದು, ಆದರೆ ಸಂಸ್ಕಾರ ಮಾತ್ರ ಹೆತ್ತವರಿಂದಲೇ ದೊರೆಯಬೇಕು. ಹಾಗೆ ದೊರೆತ ಸಂಸ್ಕಾರ ಬದುಕಿನ ಕೊನೆಯವರೆಗೂ ಅವರನ್ನು ಮುನ್ನಡೆಸಬೇಕು. ಮೌಲ್ಯಗಳನ್ನು ಅಳವಡಿಸಿಕೊಳ್ಳುವ ನಿಟ್ಟಿನಲ್ಲಿ ಯಾವುದೇ ರೀತಿಯ ರಾಜಿಗೆ ಅವಕಾಶವಿಲ್ಲದ ಬದುಕನ್ನು ನಮ್ಮ ಮಕ್ಕಳು ನಡೆಸಲು ಸಾಧ್ಯವಾಗಲಿ ಎಂಬ ಆಶಯದೊಂದಿಗೆ

**ವೀಣಾ ಹೇಮಂತಗೌಡ ಪಾಟೀಲ್ ಮುಂಡರಗಿ ಗದಗ್........**

## ಮೆಕ್ಕೆಜೋಳ ಬೆಳೆಯುವ ರೈತರಿಗೆ ಸರ್ಕಾರಎಲ್ಲಾ ರೀತಿಯ ನೆರವು ನೆರವು : ಸಿಎಂ

**ಬೆಂಗಳೂರು, ನ.21–**ಬೆಲೆ ಕುಸಿತದಿಂದ ಸಂಕಷ್ಟ ಎದುರಿಸುತ್ತಿರುವ ರಾಜ್ಯದ ಮೆಕ್ಕೆ ಜೋಳ ಬೆಳೆಯುವ ರೈತರಿಗೆ ರಾಜ್ಯ ಸರ್ಕಾರ ಎಲ್ಲಾ ರೀತಿಯ ನೆರವು ಒದಗಿಸಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಉತ್ತರ ಕರ್ನಾಟಕದ ಮೆಕ್ಕೆಜೋಳ ಬೆಳೆಗಾರರು ನಡೆಸುತ್ತಿರುವ ಪ್ರತಿಭಟನೆ ಮತ್ತು ಮೆಕ್ಕೆ ಜೋಳ ಖರೀದಿ ಕೇಂದ್ರ ತೆರೆಯಲು ರೈತರು ಒತ್ತಾಯಿಸುತ್ತಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿಯವರು ಕಾವೇರಿ ನಿವಾಸದಲ್ಲಿ ನಡೆದ ಸಭೆಯಲ್ಲಿ ಈ ಭರವಸೆ ನೀಡಿದರು. 70ಲಕ್ಷ ಮೆಟ್ರಿಕ್ ಟನ್ ಮೆಕ್ಕೆಜೋಳವನ್ನು ಆಮದು ಮಾಡಿಕೊಳ್ಳಲಾಗಿದೆ. ನಮ ದೇಶದಲ್ಲಿಯೇ ಉತ್ಪಾದನೆ ಹೆಚ್ಚಾಗಿರುವುದರಿಂದ ಮೆಕ್ಕೆಜೋಳ ಆಮದು ಮೇಲೆ ನಿರ್ಬಂಧ ವಿಧಿಸಲು ಒತ್ತಾಯಿಸಿ ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲು ನಿರ್ಧಾರ ಮಾಡಲಾಗಿದೆ ಎಂದರು.

ಎಥೆನಾಲ್ ಉತ್ಪಾದನೆಗಾಗಿ ಮೆಕ್ಕೆ ಜೋಳವನ್ನು ತಕ್ಷಣ ಖರೀದಿಸಲು ಸೂಚಿಸಿ ರಾಜ್ಯದ ಪ್ರಮುಖ ಡಿಸ್ಟಿಲರಿಗಳೊಂದಿಗೆ ಸಭೆ ನಡೆಸಲು ಹಾಗೂ ಕುಕ್ಕುಟೋದ್ಯಮಕ್ಕೆ ಮೆಕ್ಕೆ ಜೋಳದ ಬೇಡಿಕೆಯಿದ್ದು, ಅವರೊಂದಿಗೆ ಸಹ ಮಾತುಕತೆ ನಡೆಸಲು ಸೂಚನೆ ನೀಡಿದರು.

ಸಮಸ್ಯೆಗೆ ಕಾರಣ: ಒಂದು ಕಡೆ ರಾಜ್ಯದಲ್ಲಿ ಮತ್ತು ದೇಶದಲ್ಲಿ ಮೆಕ್ಕೆಜೋಳ ಉತ್ಪಾದನೆ ಹೆಚ್ಚಳವಾಗಿದೆ. ಇದು ಗೊತ್ತಿದ್ದೂ ಕೇಂದ್ರ ಸರ್ಕಾರ ವಿದೇಶಗಳಿಂದ 70 ಲಕ್ಷ ಮೆಟ್ರಿಕ್ ಟನ್ ಮೆಕ್ಕೆಜೋಳವನ್ನು ಆಮದು ಮಾಡಿಕೊಂಡಿದೆ. ಇದರಿಂದಾಗಿ ರಾಜ್ಯದ ಮತ್ತು ದೇಶದ ಮೆಕ್ಕೆಜೋಳ ಬೆಳೆದ ರೈತರಿಗೆ ವಿಪರೀತ ಹೊರೆ ಆಗಿದೆ. ಮೆಕ್ಕೆಜೋಳದಿಂದ ಎಥೆನಾಲ್ ಉತ್ಪಾದಿಸಲು ಕೇಂದ್ರ ಸರ್ಕಾರ ರಾಜ್ಯಕ್ಕೆ ನಿಗದಿ ಮಾಡಿರುವ ಕೋಟಾ ಪ್ರಮಾಣವೂ ಅತ್ಯಂತ ಕಡಿಮೆ ಇದೆ. ಇದರಿಂದಾಗಿ ಡಿಸ್ಟಿಲರಿಗಳು



ಮೆಕ್ಕೆ ಖರೀದಿಸುವ ಪ್ರಮಾಣವೂ ಕಡಿಮೆ ಆಗಿದೆ ಎಂದು ಸಭೆಗೆ ಮಾಹಿತಿಯನ್ನು ನೀಡಲಾಯಿತು.

ಕೇಂದ್ರದ ನೋಡಲ್ ಏಜೆನ್ಸಿಗಳಾದ ನಾಫೆಡ್/ಎನ್ಸಿಸಿಎಫ್ ಮೂಲಕ ಬೆಂಬಲ ಬೆಲೆ ಯೋಜನೆಯಡಿ ಮೆಕ್ಕೆ ಜೋಳ ಸಂಗ್ರಹಣೆ ಮತ್ತು ಎಥೆನಾಲ್ ಉತ್ಪಾದನೆಗೆ ಬಳಕೆಗಾಗಿ ಈಗಾಗಲೇ ಕೇಂದ್ರ ಸರ್ಕಾರದ ಆಹಾರ ಮತ್ತು ಸಾರ್ವಜನಿಕ ವಿತರಣಾ ಇಲಾಖೆ ಮಾರ್ಗಸೂಚಿ ಬಿಡುಗಡೆ ಮಾಡಿದೆ. ಆದರೆ, ಸಂಬಂಧಪಟ್ಟ ನೋಡಲ್ ಏಜೆನ್ಸಿಗಳು ಮಾರ್ಗಸೂಚಿಯಂತೆ ಇನ್ನೂ ಖರೀದಿ ಪ್ರಕ್ರಿಯೆಯನ್ನೆ? ಆರಂಭಿಸಿಲ್ಲ. ಇದು ಸಮಸ್ಯೆ ಬಿಗಡಾಯಿಸಲು ಮುಖ್ಯ ಕಾರಣ ಎಂಬ ವಿಚಾರ ಸಭೆಯಲ್ಲಿ ಪ್ರಸ್ತಾಪವಾಯಿತು.

ಡಿಸ್ಟಿಲರಿಗಳು ಮೆಕ್ಕೆ ಜೋಳದ ಬೆಲೆ ಕಡಿಮೆ ಇದ್ದಾಗಲೇ ಹಿಂದೆಯೇ ಖರೀದಿಸಿ ಶೇಖರಣೆ ಮಾಡಿಕೊಂಡಿವೆ. ಇದರಿಂದಾಗಿ ಈಗ ಖರೀದಿಗೆ ಮುಂದೆ ಬರುತ್ತಿಲ್ಲ. ಇದು ಸ್ಪಷ್ಟ ನಿಯಮ ಉಲ್ಲಂಘನೆಯಾಗಿದ್ದು ಡಿಸ್ಟಿಲರಿಗಳು ನಿಯಮಾನುಸಾರ ಮೆಕ್ಕೆಜೋಳ ಖರೀದಿಗೆ ಮುಂದೆ ಬರಬೇಕು ಎಂದು ತೀರ್ಮಾನಿಸಲಾಯಿತು.

**ಸಲಹೆಗಳು :**ಮೆಕ್ಕೆಜೋಳದ ಆಮದಿಗೆ ಕೇಂದ್ರ ಸರ್ಕಾರ ತಕ್ಷಣ ನಿಯಂತ್ರಣ ಹೇರುವ ಮೂಲಕ ಬೆಲೆಯಲ್ಲಿ ಸ್ಥಿರತೆ ಸಾಧಿಸಲು ಸಾಧ್ಯವಿದೆ. ಈ ಬಗ್ಗೆ ಕೇಂದ್ರ ಸರ್ಕಾರವನ್ನು ಒತ್ತಾಯಿಸುವುದು. ಸದ್ಯಕ್ಕೆ 8ಲಕ್ಷ ಟನ್ ಮೆಕ್ಕೆಜೋಳವನ್ನು ತಕ್ಷಣ ಖರೀದಿಸಲು ಏಜೆನ್ಸಿಗಳನ್ನು ಒತ್ತಾಯಿಸಬೇಕು. ಖರೀದಿ ಕೇಂದ್ರಗಳನ್ನು ನಾಫೆಡ್/ಎನ್ಸಿಸಿಎಫ್ ಇನ್ನೂ ಆರಂಭಿಸದಿರುವುದರಿಂದ ತೊಂದರೆಯಾಗಿದ್ದು, ಮಾರುಕಟ್ಟೆಯಲ್ಲಿ ಧಾರಣೆಯನ್ನು ಸ್ಥಿರಗೊಳಿಸಲು ತಕ್ಷಣ ಖರೀದಿ ಪ್ರಾರಂಭಿಸಬೇಕು ಎಂಬ ಸಲಹೆ ಮಾಡಲಾಯಿತು. ಸಭೆಯಲ್ಲಿ ಸಚಿವರಾದ ಎಚ್.ಕೆ.ಪಾಟೀಲ್?, ಕೆ.ಎಚ್. ಮುನಿಯಪ್ಪ, ಶಿವಾನಂದ ಪಾಟೀಲ, ಕೆ.ವೆಂಕಟೇಶ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ .ಶಾಲಿನಿ ರಜನೀಶ್, ಅಪರ ಮುಖ್ಯ ಕಾರ್ಯದರ್ಶಿ ಅಂಜುಂ ಪರ್ವೇಜ್, ಆರ್ಥಿಕ ಇಲಾಖೆಯ ಉನ್ನತ ಅಧಿಕಾರಿಗಳು ಮತ್ತು ಸಂಬಂಧಿಸಿದ ಇಲಾಖೆಗಳ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

**ಮೆಕ್ಕೆಜೋಳ ಸಮಸ್ಯೆ:** ಕೇಂದ್ರ ಕೃಷಿ ಸಚಿವರೊಂದಿಗೆ ಚರ್ಚೆ ರಾಜ್ಯದ ಮೆಕ್ಕೆಜೋಳ ಬೆಳೆಯುವ ರೈತರ ಸಮಸ್ಯೆ ಪರಿಹಾರಕ್ಕೆ ಕೇಂದ್ರ ಸರ್ಕಾರದ ನೆರವು ಕೋರಿರುವುದಾಗಿ ಕೃಷಿ ಸಚಿವ ಎನ್ ಚಲುವರಾಯಸ್ವಾಮಿ ಅವರು ತಿಳಿಸಿದ್ದಾರೆ.ಉತ್ತರ ಕರ್ನಾಟಕದ ಮೆಕ್ಕೆಜೋಳ ಬೆಳೆಯುವ ರೈತರು ಪ್ರತಿಭಟನೆ ನಡೆಸಿ ಮೆಕ್ಕೆಜೋಳ ಖರೀದಿ ಕೇಂದ್ರ ತೆರೆಯಲು ಒತ್ತಾಯಿಸುತ್ತಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಾವೇರಿ ನಿವಾಸದಲ್ಲಿಂದು ನಡೆಸಿದ ಸಭೆಗೆ ಆನ್‌ಲೈನ್ ಮೂಲಕ ಸಚಿವರು ಭಾಗವಹಿಸಿ ಈ ಮಾಹಿತಿಯನ್ನು ನೀಡಿದ್ದಾರೆ. ನಿನ್ನೆ ರಾತ್ರಿ ಕೇಂದ್ರದ ಕೃಷಿ ಸಚಿವರನ್ನು ಭೇಟಿಯಾಗಿ ರಾಜ್ಯದ ಮೆಕ್ಕೆಜೋಳ ಬೆಳೆಯುವ ರೈತರು ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ವಿವರಿಸಲಾಗಿದೆ. ಅಲ್ಲದೆ, ಸಮಸ್ಯೆಗಳ ಪರಿಹಾರಕ್ಕೆ ಕೇಂದ್ರ ಸರ್ಕಾರದ ನೆರವು ನೀಡುವಂತೆ ಮನವಿ ಮಾಡಿರುವುದಾಗಿ ಅವರು ಸಭೆಗೆ ತಿಳಿಸಿದ್ದಾರೆ.

## ವಿದೇಶದಲ್ಲಿ ಸಿಲುಕಿದ 25 ಕನ್ನಡಿಗರು ಸೇರಿ ಒಟ್ಟು 125 ಭಾರತೀಯರ ರಕ್ಷಣೆ



**ದೆಹಲಿ,ನ.21–** ವಿದೇಶದಲ್ಲಿ ಉದ್ಯೋಗ ಅರಸಿಕೊಂಡು ಹೋಗಿ ವಂಚಕರ ಜಾಲಕ್ಕೆ ಸಿಲುಕಿದ್ದ 25 ಕನ್ನಡಿಗರು ಸೇರಿ ಒಟ್ಟು 125 ಭಾರತೀಯರನ್ನು ರಕ್ಷಣೆ ಮಾಡಿ ತವರಿಗೆ ಕರೆದಾರಲಾಗಿದೆ.

ಸೇನಾ ವಿಮಾನದ ಮೂಲಕ ಥೈಲ್ಯಾಂಡ್ ನಿಂದ ಯುವಕರು ಭಾರತಕ್ಕೆ ಹಿಂತಿರುಗಿದ್ದಾರೆ. ಇದರೊಂದಿಗೆ, ಈ ವರ್ಷದ ಮಾರ್ಚ್ ನಿಂದ ಮ್ಯಾನ್ಮಾರ್ ಕಳ್ಳ ಸಾಗಣಿ ಕೇಂದ್ರಗಳಿಂದ ಒಟ್ಟು 1500 ಭಾರತೀಯರನ್ನು ಥೈಲ್ಯಾಂಡ್ ಮೂಲಕ ದೇಶಕ್ಕೆ ಮರಳಿ ಕರೆತರಲಾಗಿದೆ ಎಂದು ಭಾರತೀಯ ರಾಯಭಾರಿ ಕಚೇರಿ ತಿಳಿಸಿದೆ

## ಜಿಲ್ಲೆಯಾದ್ಯಂತ ನ.24 ರಿಂದ ಡಿ.9 ರವರೆಗೆ ಕುಷ್ಠರೋಗ ಪ್ರಕರಣ ಪತ್ತೆ ಹಚ್ಚುವ ಆಂದೋಲನ

**ಬೀದರ, ನ.21–** ಕುಷ್ಠರೋಗ ಪ್ರಕರಣ ಪತ್ತೆ ಹಚ್ಚುವ ಆಂದೋಲನ ನ.24 ರಿಂದ ಡಿ.9 ರವರೆಗೆ ಜಿಲ್ಲೆಯಾದ್ಯಂತ ಹಮ್ಮಿಕೊಳ್ಳಲಾಗಿದ್ದು, ಆಂದೋಲನವನ್ನು ಯಶಸ್ವಿಗೊಳಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ ಸೂಚಿಸಿದರು.

ಅವರು ಗುರುವಾರ ಸಂಜೆ ಜಿಲ್ಲಾ ಪಂಚಾಯತ ಕಾರ್ಯಾಲಯದಲ್ಲಿ ಕುಷ್ಠರೋಗ ಪತ್ತೆ ಹಚ್ಚುವ ಆಂದೋಲನದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಮಾಜದಲ್ಲಿ ಯಾವುದೇ ವ್ಯಕ್ತಿಗಳಿಗೆ ಕುಷ್ಠರೋಗ ಲಕ್ಷಣಗಳಾದ ಸ್ಪರ್ಶ ಜ್ಞಾನ ನೋವು ನವೆ ಇಲ್ಲದ ತಿಳಿ ಬಿಳಿ ತಾಮ್ರ ಬಣ್ಣದ ಮಚ್ಚೆಗಳು, ಕೈ ಕಾಲು ಜೋಮು ಉಂಟಾಗುವುದು, ಮಚ್ಚೆಯ ಜಾಗದಲ್ಲಿ ಕೂದಲುಗಳು ಉದುರುವಿಕೆ ಇವು ಕುಷ್ಠರೋಗದ ಲಕ್ಷಣಗಳಾಗಿವೆ ಇದು ಒಂದು ನರ ಮತ್ತು ಚರ್ಮದ ಕಾಯಿಲೆಯಾಗಿದು ಕುಷ್ಠರೋಗದಿಂದ ಉಂಟಾಗುವ ಅಂಗವಿಕಲತೆಗಳ ಬಗ್ಗೆ ನೆರೆ–ಹೊರೆ ವ್ಯಕ್ತಿಗಳಿಗೆ ಸೂಕ್ತ ತಿಳುವಳಿಕೆ ನೀಡಿ, ಅವಶ್ಯಕ ಚಿಕಿತ್ಸೆ ನೀಡುವಾಗ ಬೇಧ–ಬಾವ ಮಾಡದೇ ಗೌರವಯುತವಾಗಿ ಉಪಚರಿಸಿ, ರೋಗಿ ಗುಣಮುಖ ಹೊಂದಲು ಸಹಕರಿಸಿ ಸಮಾಜದಲ್ಲಿ ರೋಗದ ಬಗ್ಗೆ ಸೂಕ್ತ ತಿಳುವಳಿಕೆ ನೀಡಿ ಪ್ರಾರಂಭದ ಹಂತದಲ್ಲೆ ರೋಗ ಪತ್ತೆ ಮಾಡಿ ಬಹು ಔಷಧಿ ಚಿಕಿತ್ಸೆ ಪಡೆಯುವುದರಿಂದ ಸಂಪೂರ್ಣವಾಗಿ ಗುಣಮುಖರಾಗುವುದಲ್ಲದೆ, ಮುಂದಾಗಬಹುದಾದ ವಿಕಲಾಂಗತೆಯನ್ನು ಕೂಡ ತಡೆಗಟ್ಟಬಹುದು, ಇದಕ್ಕೆಲ್ಲಾ ಮಿಗಿಲಾಗಿ ಸಮಾಜದಲ್ಲಿರುವ ನಾವೆಲ್ಲರು ಒಗ್ಗಟ್ಟಾಗಿ ಈ ದಿಸೆಯಲ್ಲಿ ಕೆಲಸ ಮಾಡಿದರೆ ಗಾಂಧೀಜಿಯವರ ಕನಸು "ಕುಷ್ಠರೋಗ ಮುಕ್ತ ಭಾರತವನ್ನು" ನಿರ್ಮಿಸಬಹುದಾಗಿದೆ ಎಂದರು.

ಬೀದರ ಜಿಲ್ಲಾದ್ಯಂತ ಕುಷ್ಠರೋಗ ಪ್ರಕರಣ ಪತ್ತೆ ಹಚ್ಚುವ ಅಂದೋಲನದಲ್ಲಿ ಒಟ್ಟು 564 ತಂಡಗಳಿದ್ದು, ಇದರಲ್ಲಿ 1128 ಸದಸ್ಯರಿರುತ್ತಾರೆ. 56 ಮೇಲ್ವಿಚಾರಕರು ಕೆಲಸ ನಿರ್ವಹಿಸಲ್ಲಿದ್ದು, ಒಟ್ಟು 158005 ಮನೆಗಳಿಗೆ ಬೇಟಿ ನೀಡಿ 839128 ಜನರಿಗೆ ಪರೀಕ್ಷೆ ಮಾಡಲಿದಾರೆ. ಪ್ರತಿ ತಂಡಗಳ ಒಬ್ಬ ಮಹಿಳಾ ಮತ್ತು ಪುರುಷ ಸದಸ್ಯರುತ್ತಾರೆ. ಬೀದರ ಜಿಲ್ಲೆಯಲ್ಲಿ 66 ಕುಷ್ಠರೋಗಿಗಳು ಬಹು ಔಷಧಿ ಚಿಕಿತ್ಸೆ ಪಡೆಯುತ್ತಿದ್ದಾರೆಂದರು.



ಕುಷ್ಠರೋಗವು ಒಂದು ಸಾಂಕ್ರಾಮಿಕ ರೋಗ, ಇದು ಯಾವುದೇ ಶಾಪ ಪಾಪ ದಿಂದ ಬರುವುದಿಲ್ಲ ಈ ಕಾಯಿಲೆ ಮೈಕೋ ಬ್ಯಾಕ್ಟೀರಿಯಾ ಲೆಪ್ರೆ ಎಂಬ ರೋಗಾಣುವಿನಿಂದ ಬರುತ್ತದೆ ,ಈ ಬ್ಯಾಕ್ಟೀರಿಯಾಗಳು ಬಹು ಔಷಧಿ ಚಿಕಿತ್ಸೆ ಪಡೆಯದೇ ಇದ್ದ ಸೋಂಕಿತ ವ್ಯಕ್ತಿ ಸೀನಿದಾಗ ಕೆಮ್ಮಿದಾಗ ಹೊರಬರುವ ತುಂತುರ ಹನಿಗಳ ಮೂಲಕ ರೋಗಾಣುಗಳು ಗಾಳಿಯಲ್ಲಿ ಸೇರಿಕೊಂಡು ಒಬ್ಬರಿಂದ ಒಬ್ಬರಿಗೆ ಹರಡುತ್ತದೆ. ಈ ಕಾಯಿಲೆಯಿಂದ ಹೆದರಬೇಕಾಗುವುದಿಲ್ಲಾ. ಅದನು ಗುಪ್ತವಾಗಿಡದೆ ತಮ್ಮ ಸಮೀಪದ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳ ಗಮನಕ್ಕೆ ತಂದು, ಪ್ರಾರಂಭಿಕ ಹಂತದಲ್ಲೆ ಪತ್ತೆ ಹಚ್ಚಿ ಬಹು ಔಷಧಿಂದ ಸಂಪೂರ್ಣವಾಗಿ ಗುಣಪಡಿಸಬಹುದಾಗಿದೆ. ಎಂದರು.

ರಾಷ್ಟ್ರೀಯ ಕುಷ್ಠರೋಗ ನಿರ್ಮೂಲನೆ ಕಾರ್ಯಕ್ರಮದಡಿಯಲಿ ಕುಷ್ಠ ರೋಗ ಪತ್ತೆ ಹಚ್ಚುವ ಆಂದೋಲನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಬೇಕಾಗಿದ್ದು, ಈ ಕಾರ್ಯಕ್ರಮವನ್ನು ಭಾರತ ಸರ್ಕಾರದಿಂದ ಮರು ನೇಮಕ ಮಾಡಿದ್ದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಶಿಕ್ಷಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಮಹಿಳಾ ಮತ್ತು ಮಕ್ಕಳಾ ಅಭಿವೃದ್ಧಿ ಇಲಾಖೆಯ ಸಮನ್ವಯದೊಂದಿಗೆ ಈ ಕಾರ್ಯಕ್ರಮವನ್ನು ಅಂತರ್ ಇಲಾಖಾ ಸಮನ್ವಯದೊಂದಿಗೆ, ಗ್ರಾಮ ಪಂಚಾಯಿತಿ ಮಟ್ಟದಿಂದ ಜಿಲ್ಲಾ ಮತ್ತು ರಾಜ್ಯ ಮಟ್ಟದವರೆಗೆ ಹಮ್ಮಿಕೊಳ್ಳಬೇಕಾಗಿರುತ್ತದೆ. ದಿನಾಂಕ:–24–11–2025 ರಿಂದ 09–12–2025ರ ವರೆಗೆ ಎಲ್ಲಾ ಗ್ರಾಮ ಪಂಚಾಯಿತಿ, ಪುರಸಭೆಗಳಿಲ್ಲಿ ಸಂಬಂಧಪಟ್ಟ ಅಧ್ಯಕ್ಷರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಿ ಕುಷ್ಠರೋಗ ನಿವಾರಿಸಲು ಗ್ರಾಮದಲ್ಲಿ ಟಂಟಂ ಮಾಡಿಸಿ ಜನರಲ್ಲಿ ಜಾಗ್ರತಿ ಮೂಡಿಸಿ ಸಮ್ಮಿಕ್ಷೆ ಮಾಡುವ ಸಿಭಂದಿಗಳಿಗೆ ಸಹಕಾರ ನೀಡುವದರೋಂದಿಗೆ ಕುಷ್ಠರೋಗಕೆ ಸಂಬಂದಿಸಿದಂತೆ ಸಮಾಜದಲ್ಲಿನ ಕಳಂಕವನ್ನು ಹಾಗೂ ಮಾಹಿತಿಯನ್ನು ಜನಸಾಮಾನ್ಯರಿಗೆ ಜನಪ್ರತಿನಿಧಿಗಳ ಮುಖಾಂತರ ತಿಳಿಸಬೇಕು ಜಿಲ್ಲಾ ಮಟ್ಟದಲ್ಲಿ ತಾಲ್ಲೂಕು ಮಟ್ಟದಲ್ಲಿ ಮತ್ತು ಗ್ರಾಮ ಮಟ್ಟದಲ್ಲಿ ಐಇಸಿ ಕಾರ್ಯಕ್ರಮವನ್ನು ಹಮ್ಮಿಕೊಂಡು ಜನರಿಗೆ ಹೆಚ್ಚಿನ ಅರಿವು ಮೂಡಿಸಬೇಕೆಂದು ಹೇಳಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ ಅವರು ಕುಷ್ಠ ರೋಗ ಪತ್ತೆ ಹಚ್ಚುವ ಆಂದೋಲನ ಕಾರ್ಯಕ್ರಮದ ಭಿತ್ತಿಪತ್ರಗಳು ಹಾಗೂ ಬ್ಯಾನರಗಳನ್ನು ಬಿಡುಗಡೆ ಮಾಡಿದರು.

ಈ ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ.ಧ್ಯಾನೇಶ್ವರ ನಿರಗುಡಿ, ಜಿಲ್ಲಾ ಕುಷ್ಠರೋಗ ನೀಮೂರ್ಲನೆ ಅಧಿಕಾರಿ ಡಾ.ಕಿರಣ.ಎಮ್. ಪಾಟೀಲ್, ಆರೋಗ್ಯ ಕಾರ್ಯಕ್ರಮದ ಅನುಷ್ಠಾನ ಅಧಿಕಾರಿ ಡಾ.ಶಂಕ್ರೆಪ್ಪಾ ಬೊಮ್ಮಾ, ಡಾ.ಶಿವಶಂಕರ ಬಿ, ಡಾ.ರಾಜಶೇಖರ ಪಾಟೀಲ್, ಡಾ.ದೀಲಿಪ್ ಡೋಂಗ್ರೆ, ಡಾ.ಅನೀಲ್ ಚಿಂತಾಮಣಿ, ತಾಲ್ಲೂಕಾ ಆರೋಗ್ಯ ಅಧಿಕಾರಿ ಡಾ,ಸಂಗಾರಡ್ಡಿ, ಸಂಗಪ್ಪ ಕಾಂಬ್ಳೆ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ, ಸಂಗೀತಾ, ಡಾ.ರೇಣುಕಾ, ವೀರಶೆಟ್ಟಿ ಚನ್ನಶೆಟ್ಟಿ, ಬಸವರಾಜ ರಾಜಕುಮಾರ, ಭಮರಾಂಬ ದೇವಿ, ಜ್ಯುಓತಿ, ಇಮ್ಮಾನ್ಯೂವಲ್, ಶಾಮರಾವ, ಅಬ್ದುಲ್‌ಹೈ, ಅಫ್ಜಲೋದಿನ್, ಅರವಿಂದ, ಗೋರಕನಾತ್ ಸೇರಿದಂತೆ ವಿವಿಧ ಇಲಾಖೆಯಗಳು ಅಧಿಕಾರಿಗಳು, ಸಿಬ್ಬಂದಿಗಳು ಉಪಸ್ಥಿತರಿದ್ದರು.

ಯುವ ಮಾರ್ಗ

ಶನಿವಾರ: 22–11–2025

## ಕಾಂಗ್ರೆಸ್ ಅಲ್ಪಸಂಖ್ಯಾತರ ಘಟಕದ ತಾಲೂಕು ಪ್ರಧಾನ ಕಾರ್ಯದರ್ಶಿಯಾಗಿ ಖಾಸಿಂ ಅಲಿ ಬಿ.ಗಣೇಕಲ್ ನೇಮಕ



ಯುವಮಾರ್ಗ ಸುದ್ದಿ

**ಅರಕೇರಾ,ನ.21–**ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಅಲ್ಪಸಂಖ್ಯಾತರ ಘಟಕದ ಜಿಲ್ಲಾ ಅಧ್ಯಕ್ಷರಾದ ಸೈಯ್ಯದ ಫೈಯಾಜುದ್ದೀನ್ ಇವರ ಆದೇಶದ ಮೇರೆಗೆ, ಹಾಗೂ ದೇವದುರ್ಗ ವಿಧಾನಸಭಾ ಕ್ಷೇತ್ರದ ಪರಾಜಿತ ಅಭ್ಯರ್ಥಿಯಾದ ಶ್ರೀದೇವಿ ನಾಯಕ ಇವರ ಶಿಫಾರಸ್ಸಿನ ಮೇರೆಗೆ ಕಾಂಗ್ರೇಸ್ ಪಕ್ಷದ ಸಂಘಟನೆಯ ಹಿತ ದೃಷ್ಟಿಯಿಂದ ಕಾಸಿಂ ಅಲಿ ತಂದೆ ಖಲೀಲ್ ಸಾಬ ಬಿ ಗಣೇಕಲ್ ಇವರನ್ನು ಬ್ಲಾಕ್ ಕಾಂಗ್ರೆಸ್ ಸಮಿತಿಯ ಅಲ್ಪಸಂಖ್ಯಾತರ ಘಟಕದ ಅರಕೇರಾ ತಾಲೂಕ ಪ್ರಧಾನ ಕಾರ್ಯದರ್ಶಿಯನ್ನಾಗಿ ನೇಮಕ ಮಾಡಲಾಯಿತು.

ತಕ್ಷಣದಿಂದಲೇ ಜವಬ್ದಾರಿಯನ್ನು ವಹಿಸಿಕೊಂಡು ಪಕ್ಷದ ಸಂಘಟನೆ ಜೊತೆಗೆ ಅಲ್ಪಸಂಖ್ಯಾತರ ಸಮುದಾಯದ ಅಭಿವೃದ್ಧಿಯಲ್ಲಿ ತೊಡಗಬೇಕೆಂದು ನೇಮಕಾತಿ ಆದೇಶ ಪತ್ರ ನೀಡಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ದೇವದುರ್ಗ ವಿಧಾನಸಭಾ ಕ್ಷೇತ್ರದ ಪರಾಜಿತ ಅಭ್ಯರ್ಥಿಯಾದ ಶ್ರೀದೇವಿ ನಾಯಕ, ಅರಕೇರಾ ತಾಲೂಕು ಬ್ಲಾಕ್ ಕಾಂಗ್ರೆಸ್ ಸಮಿತಿಯ ಅಲ್ಪಸಂಖ್ಯಾತರ ಘಟಕದ ಅಧ್ಯಕ್ಷರಾದ ದಸ್ತಗೀರಿ ಸಾಬ್ ಕೊತ್ತದೊಡ್ಡಿ, ಸುಭಾನ್ ಸುಲ್ತಾನ್ ಮುಂತಾದವರು ಇದ್ದರು.

## ಕೊಲೆ ಯತ್ನ ಆರೋಪದಲ್ಲಿ ಬಿಜೆಪಿ ಮುಖಂಡ ಮಣಿಕಂಠ ರಾಠೋಡ್ ಬಂಧನ

**ಕಲಬುರಗಿ,ನ.21–**ಕೊಲೆ ಯತ್ನ ಆರೋಪದಲ್ಲಿ ಬಿಜೆಪಿ ಮುಖಂಡ, ರೌಡಿಶೀಟರ್ ಮಣಿಕಂಠ ರಾಠೋಡ್‌ನನ್ನು ನೆಲೋಗಿ ಪೊಲೀಸರು ತಡರಾತ್ರಿ ಬಂಧಿಸಿದ್ದಾರೆ.

ಜಿಲ್ಲೆಯ ಅಫಜಲಪುರ ತಾಲೂಕಿನ ಮಾಶಾಳ ಗ್ರಾಮದಲ್ಲಿ ಜೇವರ್ಗಿ ತಾಲೂಕಿನ ನೆಲೋಗಿ ಪೊಲೀಸರು ತಡರಾತ್ರಿ ಕಾರ್ಯಾಚರಣೆ ನಡೆಸಿ ಮಣಿಕಂಠ ರಾಠೋಡ್‌ನನ್ನು ಬಂಧಿಸಿದ್ದಾರೆ. ಸದ್ಯ ಮಣಿಕಂಠ ರಾಠೋಡ್‌ನನ್ನು ನ್ಯಾಯಾಲಯವು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದೆ.

ಏನಿದು ಪ್ರಕರಣ?

ನಾಟಿ ಔಷಧಿ ಕೊಡುತ್ತಿದ್ದ ರಶೀದ್ ಮತ್ಯಾ ಎಂಬಾತನ ಬಂಧನಕ್ಕೆ ಆಗ್ರಹಿಸಿ ಮಣಿಕಂಠ ಜೇವರ್ಗಿ ತಾಲೂಕಿನ ನಾರಾಯಣಪುರ ಗ್ರಾಮದಲ್ಲಿ ರಶೀದ್ ಬೆಂಬಲಿಗರೊಂದಿಗೆ ವಾಗ್ವಾದ ನಡೆಸಿ ಹೈಡ್ರಾಮಾ ಕ್ರಿಯೇಟ್ ಮಾಡಿದ್ದ. ಈ ವೇಳೆ ರಶೀದ್ ಮತ್ಯಾ ಕಾರು ಚಾಲಕನ ತಲೆಗೆ ಕಲ್ಲೇಟು ಬಿದ್ದಿತ್ತು. ಸದ್ಯ ರಶೀದ್ ಮತ್ಯಾ ಚಾಲಕನ ದೂರಿನ ಮೇರೆಗೆ ಕೊಲೆ ಯತ್ನ ಆರೋಪದಲ್ಲಿ ಮಣಿಕಂಠ ರಾಠೋಡ್‌ನನ್ನು ಬಂಧಿಸಲಾಗಿದೆ.

# ನವೆಂಬರ್ 24ರಂದು ವಿದ್ಯುತ್ ವ್ಯತ್ಯಯ

**ರಾಯಚೂರು,ನ.21–** ಇಲ್ಲಿನ ಜೆಸ್ಕಾಂ ಕಾರ್ಯ ಮತ್ತು ಪಾಲನೆಯ ಗ್ರಾಮೀಣ ಉಪ–ವಿಭಾಗದ ವ್ಯಾಪ್ತಿಗೆ ಬರುವ 33/11 ಕೆವಿ ಚಂದ್ರಬಂಡ ವಿದ್ಯುತ್ ಉಪ–ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ನವೆಂಬರ್ 24ರಂದು ಬೆಳಗ್ಗೆ 10 ರಿಂದ ಸಂಜೆ 4 ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ–ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಚಿವರಾದ ಎನ್.ಎಸ್.ಬೋಸರಾಜು ರಾಯಚೂರು ಜಿಲ್ಲಾ ಪ್ರವಾಸ

**ರಾಯಚೂರು,ನ.21–** ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಹಾಗೂ ಕರ್ನಾಟಕ ವಿಧಾನ ಪರಿಷತ್ ಸಭಾ ನಾಯಕರಾದ ಎನ್.ಎಸ್.ಬೋಸರಾಜು ಅವರು ನವೆಂಬರ್ 23ರಂದು ರಾಯಚೂರು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.

ನವೆಂಬರ್ 23ರ ಬೆಳಿಗ್ಗೆ 10.30ಕ್ಕೆ ರಾಯಚೂರು ನಗರದಿಂದ ನಿರ್ಗಮಿಸಿ ಮಧ್ಯಾಹ್ನ 12 ಗಂಟೆಗೆ ಕವಿತಾಳಗೆ ತೆರಳಿ ಸ್ಥಳೀಯ ಕಾರ್ಯಕ್ರಮದಲ್ಲಿ ಭಾಗಿಯಾಗುವರು. ಮಧ್ಯಾಹ್ನ 2 ಗಂಟೆಗೆ ಕವಿತಾಳದಿಂದ ನಿರ್ಗಮಿಸಿ ರಾಯಚೂರು ನಗರಕ್ಕೆ ಆಗಮಿಸಿ ಸಂಜೆ 4 ಗಂಟೆಗೆ ನಡೆಯುವ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸುವರು. ಬಳಿಕ ರಾತ್ರಿ 9.40ಕ್ಕೆ ರಾಯಚೂರಿನಿಂದ ಎಸ್.ಬಿ.ಸಿ. ರಾಜಧಾನಿ ಎಕ್ಸ್‌ಪ್ರೆಸ್ ರೈಲಿನ ಮೂಲಕ ಬೆಂಗಳೂರಿಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಸಚಿವರ ಆಪ್ತ ಕಾರ್ಯದರ್ಶಿಗಳಾದ ವೀರಭದ್ರ ಹಂಚಿನಾಳ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಕ್ಕಳು ಅನ್ಯಾಯದ ವಿರುದ್ಧ ಧ್ವನಿ ಎತ್ತಲು ಹಿಂಜರಿಯಬಾರದು : ಆನಂದ್ ಎಚ್. ಕಣ್ಣೂರು




ಯುವಮಾರ್ಗ ಸುದ್ದಿ

**ಮಾನ್ವಿ,ನ. 21–** ಮಕ್ಕಳಿಗಾಗಿ ವಿಶೇಷ ಕಾನೂನು ಗಳಿದ್ದು, ಅನ್ಯಾಯ ವಿರುದ್ಧ ಧ್ವನಿ ಎತ್ತಲು ಹಿಂಜರಿಯಬಾರದು ಎಂದು ಸಿವಿಲ್ ನ್ಯಾಯಾಧೀಶರಾದ ಆನಂದ್ ಎಚ್ ಕೊಣ್ಣೂರು ಕಿವಿಮಾತು ಹೇಳಿದರು.

ನಗರದ ಬಾಲಕಿಯರ ಸರ್ಕಾರಿ ಪದವಿಪೂರ್ವ ಕಾಲೇಜು ಪ್ರೌಢ ಶಾಲೆ ವಿಭಾಗದಲ್ಲಿ ತಾಲೂಕ ಕಾನೂನು ಸೇವಾ ಸಮಿತಿ ಮಾನ್ವಿ ಹಾಗೂ ತಾಲೂಕ ನ್ಯಾಯವಾದಿಗಳ ಸಂಘ ಮಾನ್ವಿ ಮತ್ತು ಶಿಕ್ಷಣ ಇಲಾಖೆ ಮಾನ್ವಿ ಇವರ ಸಂಯುಕ್ತಾಶ್ರಯದಲ್ಲಿ ರಾಷ್ಟ್ರೀಯ ಕಾನೂನು ಸೇವೆಗಳ ದಿನ ಹಾಗೂ ಮಕ್ಕಳ ಹಕ್ಕುಗಳು,ಬಾಲ್ಯ ವಿವಾಹ ಮತ್ತು ಮಕ್ಕಳ ಕುರಿತು ಕಾನೂನು ಅರಿವು ನೆರವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಮಕ್ಕಳು ತಮಗೆ ಆಗುತ್ತಿರುವ ಅನ್ಯಾಯಗಳನ್ನು ಸಂಕೋಚವಿಲ್ಲದೆ ಕಾನೂನು ಅಡಿಯಲ್ಲಿ ನ್ಯಾಯ ಪಡೆದುಕೊಳ್ಳಬಹುದು. ಮಕ್ಕಳ ಮೇಲಿನ ದೌರ್ಜನ್ಯ ಇತ್ತೀಚಿನ ದಿನಗಳಲ್ಲಿ ಬಹಳಷ್ಟು ಕಡೆ ನಡೆಯುತ್ತಿವೆ. ಸಮಾಜಕ್ಕೆ ಹೆದರಿ ಬಹಳಷ್ಟು ಪ್ರಕರಣಗಳು ಬೆಳಕಿಗೆ ಬರುತ್ತಿಲ್ಲ. ಮಕ್ಕಳ ಹಕ್ಕುಗಳ ರಕ್ಷಣೆಗಾಗಿ ಆಯೋಗ, ವಿವಿಧ ಕಾನೂನು ಇವೆ. ದೌರ್ಜನ್ಯ ತಡೆಗೆ ಪೋಕ್ಸೋ ಕಾಯ್ದೆ ಜಾರಿ ಮಾಡಲಾಗಿದೆ. ಅನ್ಯಾಯವಾದರೆ ಪೊಲೀಸ್ ಇಲಾಖೆಗೆ ಸಂಬಂಧ ಪಟ್ಟವರಿಗೆ ದೂರು ನೀಡಬೇಕು. ಗುಪ್ತ ವಿಚಾರಣೆ ನಡೆಸಿ ಆರೋಪಿಗೆ ಶಿಕ್ಷೆ ನೀಡಲಾಗುತ್ತದೆ. ದೂರುದಾರರ ಹೆಸರು ಬಹಿರಂಗ ಪಡೆಸುವುದಿಲ್ಲ ಹಾಗಾಗಿ ಕಾನೂನಿನ ಸದುಪಯೋಗ ಪಡೆಯಬೇಕು. ದುರುಪಯೋಗ ಮಾಡಿಕೊಳ್ಳಬಾರದು. ವಿದ್ಯಾರ್ಥಿಗಳು ಸೋಶಿಯಲ್ ಮೀಡಿಯಾದಿಂದ ದೂರ ಉಳಿದು ಕಲಿಕೆಗೆ ಹೆಚ್ಚು ಹೊತ್ತು ಕೊಡಬೇಕು ಎಂದು ತಿಳಿಸಿದರು.

ಇದೆ ವೇಳೆ ಶ್ರೀದೇವಿ ಶರಣ ಪಾಟೀಲ್ ವಕೀಲರು ವಿಶೇಷ ಉಪನ್ಯಾಸ ನೀಡಿದರು. ವಕೀಲರಾದ ಸ್ಟೆಲ್ಲಾ ಶಾರ್ಲೇಟ್ ಮತ್ತು ಗುಂಡಮ್ಮ ಮೇಟಿ ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ್ ದೊಡ್ಡಮನಿ ವಹಿಸಿದ್ದರು.

ಇದಕ್ಕೂ ಮುನ್ನಾ ಶಾಲೆಯಲ್ಲಿನ ಬಿಸಿಯೂಟ ಮತ್ತು ಶುಚಿತ್ವ ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕಿ ಅರ್ಚನಾ ಯಾದವ್, ವಕೀಲರಾದ ಚನ್ನಬಸವ ನಾಯಕ್ ಬಲ್ಲಟಗಿ, ಉಪ ಪ್ರಚಾರ್ಯರಾದ ಸಂಜೀವ್ ಸುಧಾಕರ್, ವಕೀಲರಾದ ಮನೋಹರ ವಿಶ್ವಕರ್ಮ ಸೇರಿದಂತೆ ಶಾಲಾ ಸಿಬ್ಬಂದಿಗಳು ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ದತ್ತಾತ್ರೇಯ ಕೊಟ್ನೆಕಲ್ ವಕೀಲರು ನಡೆಸಿಕೊಟ್ಟರು.

# ಚಿತೆ ಸತ್ತವರನ್ನು ಸುಟ್ಟರೆ, ಚಿಂತೆ ಜೀವಂತವಿರುವವರನ್ನು ಸುಡುತ್ತದೆ : ಮಹಿಬೂಬ್ ಮದ್ಲಾಪುರ

ಯುವಮಾರ್ಗ ಸುದ್ದಿ



**ಮಾನ್ವಿ,ನ.21–** ಮಾನಸಿಕವಾಗಿ ಕುಗ್ಗವುದು ಇತ್ತೀಚಿನ ಯುವಕರ ಮನೋಧೋರಣೆಯಾಗಿದೆ ಅನಾವಶ್ಯಕ ವಿಷಯಗಳು ಸರಿಯಾದ ಮಾರ್ಗದರ್ಶನ ಇಲ್ಲದ್ದು, ನಿರ್ಧಾರ ತೆಗೆದುಕೊಳ್ಳುವಲ್ಲಿ ವಿಫಲತೆ ಯುವಕರಲ್ಲಿ ದಾರಿ ತಪ್ಪುವುದು ಕಂಡುಬರುತ್ತಿದೆ ಇದಕ್ಕೆ ಪರಿಹಾರ ಮಾರ್ಗದರ್ಶನ ಇದನ್ನು ಬುದ್ದಿಜೀವಿಗಳಾದ ನಾವು ನೀವುಗಳು ಗಮನಹರಿಸಿ ತಿಳಿದುಕೊಂಡು ತಿಳಿಹೇಳುವುದು ಅವಶ್ಯಕವಾಗಿದೆ ಇಲ್ಲವಾದಲ್ಲಿ ಯುವಕರು ಚಿಂತಿಸಿ ಹೆಣಗಳಾಗುತ್ತಿದ್ದಾರೆ ಚಿತೆಗಿಂತ ಚಿಂತೆಗೆ ಬಲಿಯಾಗುತ್ತಿದ್ದಾರೆ ಎಂದು ಸಂಪನ್ಮೂಲ ವ್ಯಕ್ತಿ ಮಹಿಬೂಬ್ ಮದ್ಲಾಪುರ ವಿಶೇಷ ಉಪನ್ಯಾಸದಲ್ಲಿ ಹೇಳಿದರು.

ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ ಮತ್ತು ವೆಂಕಟೇಶ್ವರ ಪದವಿ ಮಹಾವಿದ್ಯಾಲಯ ಮಾನವಿ ಸಂಯೋಜನೆಯಲ್ಲಿ ಸ್ವಾಸ್ಥ್ಯ ಸಂಕಲ್ಪ ಕಾರ್ಯಕ್ರಮದಲ್ಲಿ ದುಶ್ಚಟ ಮತ್ತು ಮಾನಸಿಕ ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯಲ್ಲಿ ಆಂಜನೇಯ ನಸಲಾಪುರ ಮಾತಡನಾಡುತ್ತಾ "ಯುವಕರು ಫ್ಯಾಶನ್, ಚಟಗಳಿಗೆ, ಆಡಂಬರ ತೋರ್ಪಡಿಗೆ ಬಲಿಯಾಗಿ ಜೀವನ ಹಾಳುಮಾಡಿಕೊಳ್ಳದಿರಿ ಹುಟ್ಟಿದ್ದೇ ಸಾಧಿಸಲು ಕುಟುಂಬಕ್ಕೆ ಹೊರೆಯಾಗುವುದಕ್ಕಿಂತ ಆಸರೆಯಾಗುವ ಹಾಗೆ ಬದುಕಿ ಗುಟ್ಕಾ, ತಂಬಾಕು, ಮದ್ಯಪಾನ, ಧೂಮಪಾನ ಆರೋಗ್ಯ ಅಷ್ಟೆ ಕೆಡಿಸುವುದಲ್ಲ ಇವು ಮಾನಸಿಕ, ದೈಹಿಕ, ಆರ್ಥಿಕವಾಗಿ ಕುಗ್ಗಿಸುತ್ತವೆ ಎಂದರು.

ವೇಧಿಕೆಯಲ್ಲಿ ಧರ್ಮಸ್ಥಳದ ಸುಪ್ರಾವೈಸರ್ ರವಿಚಂದ್ರ ಪ್ರಾಚಾರ್ಯ ಶಂಕ್ರಪ್ಪ ಅಂಗಡಿ, ಉಪನ್ಯಾಸಕಿ ಆಫೀಯಾ ಅಂಜುಮ್, ಶೈಲಜಾ, ಮಹೆಬೂಬ್ ಮಾನ್ವಿ ಇದ್ದರು. ನಿರೂಪಣೆ ವರದರಾಜ್ ಸ್ವಾಗತ ನರೇಶ ಪ್ರಾರ್ಥನೆ ರಾಜೇಶ್ವರಿ ಸ್ನೇಹಾ ಮತ್ತು ವಿದ್ಯಾರ್ಥಿಗಳು ಇದ್ದರು.

# ಗ್ರಾಮ ಪಂಚಾಯಿತಿ ನೌಕರರ ಬೇಡಿಕೆಗಳಿಗೆ ಅಧಿವೇಶನದಲ್ಲಿ ಧ್ವನಿಗೂಡಿಸಲು ಮನವಿ

ಯುವಮಾರ್ಗ ಸುದ್ದಿ

**ಮಾನ್ವಿ,ನ.21–** ತಾಲೂಕಿನ ಗ್ರಾಮ ಪಂಚಾಯಿತಿ ನೌಕರರ ವಿವಿಧ ಬೇಡಿಕೆಗಳನ್ನು ಈ ಬಾರಿಯ ಚಳಿಗಾಲದ ಅಧಿವೇಶನದಲ್ಲಿ ಪ್ರಸ್ತಾಪಿಸಿ, ನೌಕರರ ಪರವಾಗಿ ಬೆಂಬಲಕ್ಕೆ ನಿಲ್ಲುವಂತೆ ಕೋರಿ ಮಾನ್ವಿ ಶಾಸಕ ಜಿ. ಹಂಪಯ್ಯ ನಾಯಕ ಅವರ ಪುತ್ರ ಗಂಗಣ್ಣ ಸಾಹುಕಾರ್‌ಗೆ ಗ್ರಾಮ ಪಂಚಾಯಿತಿ ನೌಕರರ ಸಂಘದ ವತಿಯಿಂದ ಗುರುವಾರ ಮನವಿ ಸಲ್ಲಿಸಲಾಯಿತು.

ನಗರದಲ್ಲಿ ಶಾಸಕರ ಅನುಪಸ್ಥಿತಿಯಲ್ಲಿ, ಅವರ ಸುಪುತ್ರ ಹಾಗೂ ಜಿಲ್ಲಾ ಪಂಚಾಯತ್ ಮಾಜಿ ಸದಸ್ಯರಾದ ಜಿ. ಗಂಗಣ್ಣ ನಾಯಕ ಅವರು ನೌಕರರ ಮನವಿ ಪತ್ರವನ್ನು ಸ್ವೀಕರಿಸಿದರು. ಮುಂಬರುವ ಅಧಿವೇಶನದಲ್ಲಿ ನೌಕರರ ಸಮಸ್ಯೆಗಳ ಕುರಿತು ಸರ್ಕಾರದ ಗಮನ ಸೆಳೆಯುವಂತೆ ನೌಕರರು ಇದೇ ವೇಳೆ ಒತ್ತಾಯಿಸಿದರು.



ಈ ಸಂದರ್ಭದಲ್ಲಿ ಮುಖಂಡರಾದ ಗೋಪಾಲ್ ನಾಯಕ್ ನೀರ್ ಮಾನ್ವಿ, ಶರಣಬಸವ ನೀರ್ ಮಾನ್ವಿ, ಹನುಮೇಶ್ ನೀರ್ ಮಾನ್ವಿ ಸೇರಿದಂತೆ ಗ್ರಾಮ ಪಂಚಾಯಿತಿ ನೌಕರರ ಸಂಘದ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಧಮ್ಮೂರ: ಕತ್ತು ಹಿಸುಕಿ ವೃದ್ಧೆ ಕೊಲೆ

**ಕಲಬುರಗಿ,ನ.21–**ಕತ್ತು ಹಿಸುಕಿ ವೃದ್ಧೆಯೊಬ್ಬರನ್ನು ಕೊಲೆ ಮಾಡಿರುವ ಘಟನೆ ಕಮಲಾಪುರ ತಾಲೂಕಿನ ಧಮ್ಮೂರ ಪುನರ್ವಸತಿ ಕೇಂದ್ರದಲ್ಲಿ ಬುಧವಾರ ರಾತ್ರಿ ನಡೆದಿದೆ.ರಾಧಾಬಾಯಿ ಅಣ್ಣಪ್ಪ ಮೇಲಕೇರಿ (70) ಕೊಲೆಯಾದ ವೃದ್ಧೆ.ಧಮ್ಮೂರ ಪುನರ್ವಸತಿ ಕೇಂದ್ರದಲ್ಲಿನ ಮನೆಯಲ್ಲಿ ಕೊಲೆ ನಡೆದಿದೆ. ಈ ಕುರಿತು ರಾಧಾಭಾಯಿ ಪುತ್ರ ಮಲ್ಲಿಕಾರ್ಜುನ ಪೊಲೀಸರಿಗೆ ದೂರು ನೀಡಿದ್ದಾರೆ. ವೃದ್ಧೆಯ ಕತ್ತಿನಲ್ಲಿ ಗಾಯಗಳು ಕಂಡು ಬಂದಿದೆ.ಸ್ಥಳಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸುಲು, ಡಿವೈಎಸ್‌ಪಿ ಲೋಕೇಶ್ವರ ಪೂಜಾರಿ, ಪಿಎಸ್‌ಐ ಬಸವರಾಜ ಚಿತ್ರಕೋಟಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಈಈ ಕುರಿತು ಮಹಾಗಾಂವ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

## ಬೀದಿನಾಯಿಗಳು ವಾಸವಿದ್ದಲ್ಲಿ ಪರಿಶೀಲಿಸಿ ಲೆಕ್ಕ ನೀಡಲು ಪಾಲಿಕೆಯ ಆಯುಕ್ತರ ಸೂಚನೆ

**ರಾಯಚೂರು,ನ.21–** ರಾಯಚೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ಖಾಸಗಿ ಹಾಗೂ ಸರ್ಕಾರಿ ಶಿಕ್ಷಣ ಸಂಸ್ಥೆಗಳು, ಖಾಸಗಿ ಹಾಗೂ ಸರ್ಕಾರಿ ಆಸ್ಪತ್ರೆಗಳು, ಕ್ರೀಡಾ ಸಂಕೀರ್ಣಗಳು, ಬಸ್ ನಿಲ್ದಾಣಗಳು, ರೈಲ್ವೆ ನಿಲ್ದಾಣಗಳ ಆವರಣದಲ್ಲಿ ಯಾವುದೇ ಬೀದಿನಾಯಿಗಳು ವಾಸವಿದ್ದಲ್ಲಿ ಅದನ್ನು ಪರಿಶೀಲಿಸಿ ಕೂಡಲೇ ಅದರ ಸಂಖ್ಯೆಯನ್ನು ಲೆಕ್ಕ ಮಾಡಿ ಮಹಾನಗರ ಪಾಲಿಕೆಯ ಪರಿಸರ ಅಭಿಯಂತರರು ಆರೋಗ್ಯ ಶಾಖೆಯ ಮುಖ್ಯಸ್ಥರಿಗೆ ತಿಳಿಸಬೇಕು.

ಮಾನ್ಯ ಸರ್ವೋಚ್ಚ ನ್ಯಾಯಾಲಯವು ಸ್ವಯಂಪ್ರೇರಿತ ರಿಟ್ ಅರ್ಜಿ ಸಂಖ್ಯೆ 5/2025 ರಲ್ಲಿ ನೀಡಿರುವ ನಿರ್ದೇಶನದಂತೆ ಈ ಕ್ರಮ ವಹಿಸಬೇಕಿದ್ದು, ಎಲ್ಲಾ ಸಂಸ್ಥೆಗಳ ಮುಖ್ಯಸ್ಥರು ಈ ಬಗ್ಗೆ ಗಮನ ಹರಿಸಬೇಕು.

ತಮ್ಮ ಸಂಸ್ಥೆಯ ಆವರಣದಲ್ಲಿ ಬೀದಿನಾಯಿಗಳ ಉಪಟಳ ತಡೆಯಲು ಹಾಗೂ ಅವುಗಳ ಪ್ರದೇಶ ನಿಯಂತ್ರಿಸಲು ಕ್ರಮವಹಿಸಬೇಕು. ನಗರ ಸ್ಥಳೀಯ ಸಂಸ್ಥೆಯಿಂದ ಬೀದಿನಾಯಿಗಳನ್ನು ಸ್ಥಳಾಂತರಿಸಲು ಸಹಕರಿಸಲು ಹಾಗೂ ಅವುಗಳ ಪ್ರವೇಶ ನಿರ್ಬಂಧಿಸುವುದನ್ನು ಮೇಲ್ವಿಚಾರಣೆ ಮಾಡಲು ತಮ್ಮ ಸಂಸ್ಥೆಯಿಂದ ಒಬ್ಬ ಜವಾಬ್ದಾರಿಯುತ ನೌಕರರನ್ನು ನೋಡಲ್ ಅಧಿಕಾರಿಯಾಗಿ ನೇಮಕ ಮಾಡಬೇಕು. ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದಂತೆ ತಮ್ಮ ಸಂಸ್ಥೆಯ ವ್ಯಾಪ್ತಿಯಲ್ಲಿ ಪುನಃ ನಾಯಿಗಳು ವಾಸ ಮಾಡಲು ಅವಕಾಶ ಕೊಟ್ಟಲ್ಲಿ ಅವನ್ನು ಸ್ಥಳಾಂತರಿಸುವ ವೆಚ್ಚವನ್ನು ತಮ್ಮಸಂಸ್ಥೆಯಿಂದ ವಸೂಲಿ ಮಾಡಲಾಗುವುದು. ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶ ಉಲ್ಲಂಘನೆ ಮಾಡಿದ್ದಲ್ಲಿ ನ್ಯಾಯಾಲಯದ ಆದೇಶದಂತೆ ತಮ್ಮ ವಿರುದ್ದ ಕಾನೂನುಕ್ರಮ ವಹಿಸಲಾಗುವುದು ಎಂದು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ಖಾಸಗಿ ಹಾಗೂ ಸರ್ಕಾರಿ ಶಿಕ್ಷಣ ಸಂಸ್ಥೆಗಳ, ಖಾಸಗಿ ಹಾಗೂ ಸರ್ಕಾರಿ ಆಸ್ಪತ್ರೆಗಳ, ಕ್ರೀಡಾ ಸಂಕೀರ್ಣಗಳ, ಬಸ್ ನಿಲ್ದಾಣಗಳ, ರೈಲ್ವೆ ನಿಲ್ದಾಣಗಳ ಮುಖ್ಯಸ್ಥರಿಗೆ ಮಹಾನಗರ ಪಾಲಿಕೆಯ ಆಯುಕ್ತರು ಸೂಚನೆ ನೀಡಿದ್ದಾರೆ.

### ಹಗಲು ಮನೆಗಳ್ಳತನ: 5 ಲಕ್ಷ ರೂ.ಮೌಲ್ಯದ ಚಿನ್ನಾಭರಣ ಜಪ್ತಿ



**ಕಲಬುರಗಿ,ನ.21–**ಹಗಲು ಮನೆಗಳ್ಳತನ ಮಾಡುತ್ತಿದ್ದ ಆರೋಪಿಯೊಬ್ಬನನ್ನು ಬಂಧಿಸಿರುವ ರಾಘವೇಂದ್ರ ನಗರ ಠಾಣೆ ಪೊಲೀಸರು 5 ಲಕ್ಷ ರೂಪಾಯಿ ಮೌಲ್ಯದ ಚಿನ್ನಾಭರಣ ಜಪ್ತಿ ಮಾಡಿದ್ದಾರೆ.

ನಗರದ ಎಂಎಸ್‌ಕೆ ಮಿಲ್ ಖದೀರ್ ಚೌಕ್ ನಿವಾಸಿ ಮಹ್ಮದ್ ಸಮೀರ್ ತಂದೆ ಶೇಖ್ ಮುನಿರುದ್ದೀನ್ (22) ಎಂಬಾತನನ್ನು ಬಂಧಿಸಿ 45 ಗ್ರಾಂ.ಬಂಗಾರದ ಮಂಗಳಸೂತ್ರ, 3 ಗ್ರಾಂ.ಬಂಗಾರದ ಉಂಗುರ, ಇನ್ನೊಂದು ಪ್ರಕರಣದಲ್ಲಿ 19 ಗ್ರಾಂ.ಬಂಗಾರ ಸೇರಿ 5 ಲಕ್ಷ ರೂ.ಮೌಲ್ಯದ 50 ಗ್ರಾಂ.ಬಂಗಾರದ ಆಭರಣ ಜಪ್ತಿ ಮಾಡಿ ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

ಹಗಲು ಹೊತ್ತಿನಲ್ಲಿ ಕಳ್ಳರು ಮನೆ ಬೀಗ ಮುರಿದು ಚಿನ್ನಾಭರಣ ದೋಚಿಕೊಂಡು ಹೋಗಿದ್ದಾರೆ ಎಂದು ನಗರದ ಚಿಂಚೋಳಿ ಲೇಔಟ್ ನಿವಾಸಿ ಮಲ್ಲಿಕಾರ್ಜುನ ಎಂ.ಕಲಶೆಟ್ಟಿ ಅವರು 2024ರ ಸೆಪ್ಟೆಂಬರ್ 11 ರಂದು ರಾಘವೇಂದ್ರ ನಗರ ಠಾಣೆಯಲ್ಲಿ ದೂರು ಸಲ್ಲಿಸಿದ್ದರು. ಈ ದೂರಿನ ಅನ್ವಯ ಪ್ರಕರಣ ದಾಖಲಾಗಿತ್ತು. ಪ್ರಕರಣದ ತನಿಖೆಗೆ ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ. ಡಿಸಿಪಿಗಳಾದ ಕನಿಕಾ ಸಿಕ್ರಿವಾಲ್, ಪ್ರವೀಣ್ ಹೆಚ್.ನಾಯಕ್, ಎಸಿಪಿ ಶರಣಬಸಪ್ಪ ಸುಬೇದಾರ ಅವರ ಮಾರ್ಗದರ್ಶನದಲ್ಲಿ ರಾಘವೇಂದ್ರ ನಗರ ಪೊಲೀಸ್ ಠಾಣೆ ಪಿಐ ವಾಜೀದ್ ಪಟೇಲ್, ಪಿಎಸ್‌ಐ ಸುಭಾಶ್ಚಂದ್ರ ಅವರ ನೇತೃತ್ವದಲ್ಲಿ ಸಿಬ್ಬಂದಿಗಳಾದ ಮಲ್ಲಿಕಾರ್ಜುಜ ಜಾನಿ, ಮಲ್ಲನಗೌಡ, ಉಮೇಶ್, ಶರಣಬಸವ, ಪ್ರಶಾಂತ್, ಬಸವರಾಜ, ಅರೇಶ್ ಅವರನ್ನು ಒಳಗೊಂಡ ತಂಡ ರಚಿಸಲಾಗಿತ್ತು. ಈ ತಂಡ ತನಿಖೆ ನಡೆಸಿ ಆರೋಪಿಯನ್ನು ಬಂಧಿಸಿ ಚಿನ್ನಾಭರಣ ಜಪ್ತಿ ಮಾಡಿ ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸುವಲ್ಲಿ ಯಶಸ್ವಿಯಾಗಿದೆ.

ಹಗಲು ಮನೆಗಳ್ಳತನ ಮಾಡುತ್ತಿದ್ದ ಆರೋಪಿಯನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸುವಲ್ಲಿ ಯಶಸ್ವಿಯಾಗಿರುವ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ಕಾರ್ಯವನ್ನು ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ.ಶ್ಲಾಘಿಸಿದ್ದಾರೆ.

# ಅಪರಿಚಿತ ವಾಹನ ಡಿಕ್ಕಿ: ಬೈಕ್ ಸವಾರ ಸಾವು

**ಕಲಬುರಗಿ,ನ,21–** ಇಲ್ಲಿಗೆ ಸಮೀಪದ ಶರಣ ಸಿರಸಗಿ ಹತ್ತಿರ ಅಪರಿಚಿತ ವಾಹನ ಡಿಕ್ಕಿ ಹೊಡೆದು ಬೈಕ್ ಸವಾರ ಸಾವಿಗೀಡಾಗಿದ್ದಾನೆ.

ಮೃತ ಬೈಕ್ ಸವಾರರನ್ನು ಕಲಬುರಗಿ ನಿವಾಸಿ ಸತೀಶಕುಮಾರ ವಿಜಯಕುಮಾರ ತಳವಾರ ಎಂದು ಗುರುತಿಸಲಾಗಿದೆ

ಗಾಣಗಾಪುರ ಕಡೆಗೆ ಬೈಕ್ ಮೇಲೆ ಹೊರಟಾಗ ಹಿಂದಿನಿಂದ ಬಂದ ಅಪರಿಚಿತ ವಾಹನ ಡಿಕ್ಕಿ ಹೊಡೆದು ಅವಘಡ ಸಂಭವಿಸಿದೆ.ಕಲಬುರಗಿ ಸಂಚಾರಿ ಠಾಣೆ 1 ರಲ್ಲಿ ಪ್ರಕರಣ ದಾಖಲಾಗಿದೆ

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H